EMAIL : dairyadadaari@gmail.com ಸಂಪುಟ: 01 ಸಂಚಿಕೆ: 91

ಬೆಲೆ ರೂ : 2.00

ರಾಯಚೂರು

ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಭಾನುವಾರ: 15-03-2026


**SEHRI & IFTARI TIME**

**DAY :SUNDAY**

**RAMZAN : 25**

**DATE: 15.03.2026**

**END TIME OF SEHRI :5:14 AM**

**FAJAR AZAAN : 5:19 AM**

**IFTAR TIME : 6:33 PM**

ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ
ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ ದಿನಪತ್ರಿಕೆ




ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


# ಒಳಮೀಸಲಾತಿ ಗೊಂದಲ ಶೀಘ್ರ ಇತ್ಯರ್ಥ

**ತುಮಕೂರು, ಮಾ. 14–** ಒಳಮೀಸಲಾತಿಗಳ ಗೊಂದಲಗಳಿಗೆ ಈ ತಿಂಗಳ 27ಕ್ಕೆ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ರಾಜ್ಯದಲ್ಲಿ ಒಳಮೀಸಲಾತಿ ಜಾರಿ ವಿಚಾರ ಗೊಂದಲಕ್ಕೆ ಕಾರಣವಾಗಿದ್ದು ಈ ಗೊಂದಲಗಳಿಗೆ ಈ ತಿಂಗಳ 27 ರಂದು ಪರಿಹಾರ ಕಂಡುಕೊಳ್ಳುವ ವಿಶ್ವಾಸವನ್ನು ಗೃಹ ಸಚಿವರು ವ್ಯಕ್ತಪಡಿಸಿದರು.

ಒಳಮೀಸಲಾತಿ ಜಾರಿ ಸಂಬಂಧ ಇದೇ ತಿಂಗಳ 27 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಶೇಷ ಸಂಪುಟ ಸಭೆ ಕರೆದಿದ್ದು ಈ ಸಭೆಯಲ್ಲಿ ಎಲ್ಲ ಆಯಾಮಗಳಿಂದಲೂ ಚರ್ಚೆ ನಡೆಸಿ ಒಳಮೀಸಲಾತಿ ಜಾರಿ ಗೊಂದಲಗಳನ್ನು ಬಗೆಹರಿಸಿಕೊಳ್ಳುತ್ತೇವೆ ಅವರು ಹೇಳಿದರು.

ನಗರದ ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ಗದ್ದುಗೆ ದರ್ಶನ ಪಡೆದು, ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿಯವರ ಆಶೀರ್ವಾದ ಪಡೆದು ಕೆಲಹೊತ್ತು ಸಮಾಲೋಚನೆ ನಡೆಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಒಳಮೀಸಲಾತಿ ಜಾರಿ ವಿಚಾರ ತೀರ್ಮಾನವಾದ ನಂತರ ಸರ್ಕಾರ ಆದೇಶ ಹೊರಡಿಸುತ್ತದೆ. ಸರ್ಕಾರಿ ಆದೇಶ ಹೊರ



ಬಿದ್ದ ಬಳಿಕ ನೇಮಕಾತಿ ಪ್ರಕ್ರಿಯೆ ಆರಂಭವಾಗುತ್ತದೆ ಎಂದ ಅವರು, ಈಗಾಗಲೇ ನಾವು 50 ಸಾವಿರ ಹುದ್ದೆಗೆ ನೇಮಕಾತಿ ಮಾಡಿಕೊಳ್ಳಲು ಸಿದ್ಧತೆ ಮಾಡಿಕೊಂಡಿದ್ದೇವೆ ಎಂದರು.

ಪೊಲೀಸ್ ಇಲಾಖೆಯಲ್ಲೇ 8 ಸಾವಿರ ಹುದ್ದೆಗಳು ಖಾಲಿ ಇವೆ. ಸರ್ಕಾರದ ತೀರ್ಮಾನ ಹೊರ ಬಿದ್ದ ನಂತರ ತುರ್ತಾಗಿ ನೇಮಕಾತಿ ಪ್ರಕ್ರಿಯೆ ನಡೆಸುತ್ತೇವೆ ಎಂದು ಅವರು ತಿಳಿಸಿದರು.

ಕಾಳಸಂತೆಯಲ್ಲಿ ಸಿಲಿಂಡರ್ ಮಾರಿದರೆ ಕಠಿಣ ಕ್ರಮ–ಮಧ್ಯ ಪ್ರಾಂಚ್ಯ ದೇಶಗಳ ಯುದ್ಧದಿಂದಾಗಿ ವಾಣಿಜ್ಯ ಸಿಲಿಂಡರ್‌ಗಳಿಗೆ ಅಲ್ಪ ಪ್ರಮಾಣದಲ್ಲಿ ಸಮಸ್ಯೆ ಉಂಟಾಗಿದೆ. ಆದರೆ ಗೃಹ ಬಳಕೆಯ ಸಿಲಿಂಡರ್‌ಗಳಿಗೆ ಸಮಸ್ಯೆ ತಲೆದೋರಿಲ್ಲ. ವಾಣಿಜ್ಯ ಸಿಲಿಂಡರ್ ಸಮಸ್ಯೆಯಿಂದಾಗಿ ಹೋಟೆಲ್‌ನವರಿಗೆ ಒಂದೆರೆಡು ದಿನ ಸಮಸ್ಯೆ ಆಗಬಹುದು. ಆದರೆ ಇದನ್ನೇ ನೆಪ ಮಾಡಿಕೊಂಡು ಕಾಳಸಂತೆಯಲ್ಲಿ ವಾಣಿಜ್ಯ ಸಿಲಿಂಡರ್ ಮಾರಾಟ ಮಾಡಲು ಮುಂದಾದರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ತುಮಕೂರು ಜಿಲ್ಲೆಯಲ್ಲಿ ಸದ್ಯಕ್ಕೆ ಗ್ಯಾಸ್ ಸಮಸ್ಯೆ ಇಲ್ಲ. ಗೃಹ ಬಳಕೆಯ ಸಮಸ್ಯೆ ಮೊದಲೇ ಇಲ್ಲ. ಅಲ್ಲೊ.. ಇಲ್ಲೋ.. ವಾಣಿಜ್ಯ ಬಳಕೆ ಸಿಲಿಂಡರ್ ನ ಸಮಸ್ಯೆ ತಲೆದೋರಿದೆ ಎನ್ನುತ್ತಿದ್ದಾರೆ ಎಂದರು.

ಹಾಗೆಯೇ ಸಿದ್ದಗಂಗಾ ಮಠದಲ್ಲೂ ಸದ್ಯಕ್ಕಂತೂ ಸಿಲಿಂಡರ್ ಕೊರತೆ ಉಂಟಾಗಿಲ್ಲ. ಎರಡು–ಮೂರು ಶಿಫ್ಟ್ ಹಾರ್ಮೋಸ್ ಸ್ಟ್ರೀಟ್‌ನಿಂದ ಗ್ಯಾಸ್ ಪಾಸಾಗ್ತಾವೆ. ನಮ್ಮ ದೇಶಕ್ಕೆ ಯಾವುದೇ ರೀತಿ ರೀತಿಯ ತೊಂದರೆ ಇಲ್ಲದಂತೆ ಗ್ಯಾಸ್ ಪೂರೈಕೆಗೆ ಬಿಟ್ಟಿದ್ದಾರೆ. ಹಾಗಾಗಿ ನಮಗೆ ಪೆಟ್ರೋಲ್, ಡೀಸೆಲ್ ಮತ್ತು ಗ್ಯಾಸ್ ಬೇಗ ಬರುತ್ತದೆ. ಯಾವುದೇ ತೊಂದರೆ ಇಲ್ಲ ಎಂದರು.

ನಾನು ಇಂದು ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಗಳ ಗದ್ದುಗೆಗೆ ಭೇಟಿ ನೀಡಿ ದರ್ಶನ ಪಡೆದಿದ್ದೇನೆ. ಶ್ರೀಮಠ ಹಲವು ವರ್ಷಗಳಿಂದ ಧಾರ್ಮಿಕ ಶೈಕ್ಷಣಿಕ ಕ್ಷೇತ್ರದಲ್ಲಿ ಲಕ್ಷಾಂತರ ಮಕ್ಕಳಿಗೆ ವಿದ್ಯಾದಾನ, ಅನ್ನದಾನ ಮಾಡುತ್ತಿರುವುದು ನಮಗೆಲ್ಲರಿಗೂ ಸ್ಫೂರ್ತಿಯಾಗಿದೆ ಎಂದರು.

ಮೊದಲಿನಿಂದಲೂ ನಮ್ಮ ಕುಟುಂಬ, ನಮ್ಮ 2ನೇಪುಟಕ್ಕೆ

# ಸಿರವಾರ: ಬಿರುಗಾಳಿಗೆ ಮರ ಬಿದ್ದು ಅಗ್ನಿ ಅವಘಡ – ತಪ್ಪಿದ ಭಾರಿ ಅನಾಹುತ



ಧೈರ್ಯದ ದಾರಿ

**ಸಿರವಾರ:** ಪಟ್ಟಣದ ಒಂದನೇ ವಾರ್ಡ್‌ನಲ್ಲಿ ನಿನ್ನೆ ಸಂಜೆ ಬೀಸಿದ ಬಿರುಗಾಳಿಯ ರಭಸಕ್ಕೆ ಮರವೊಂದು ವಿದ್ಯುತ್ ಪರಿವರ್ತಕದ (TC) ಮೇಲೆ ಬಿದ್ದ ಪರಿಣಾಮ ಶಾರ್ಟ್ ಸರ್ಕ್ಯೂಟ್ ಸಂಭವಿಸಿ ಬೆಂಕಿ ಕಾಣಿಸಿಕೊಂಡಿತ್ತು.

**ಘಟನೆಯ ವಿವರ:** ವಿದ್ಯುತ್ ತಂತಿಗಳ ಮೇಲೆ ಮರ ಬಿದ್ದ ತಕ್ಷಣವೇ ಕಿಡಿ ಹೊತ್ತಿಕೊಂಡು ಸಮೀಪದಲ್ಲಿದ್ದ ತಿಪ್ಪೆ ಗುಂಡಿಗಳಿಗೆ ಬೆಂಕಿ ವ್ಯಾಪಿಸಿದೆ. ಇದರಿಂದಾಗಿ ಸುತ್ತಮುತ್ತಲಿನ ತಿಪ್ಪೆ ಗುಂಡಿಗಳು ಸಂಪೂರ್ಣವಾಗಿ ಸುಟ್ಟು ಕರಕಲಾಗಿವೆ. ಅದೃಷ್ಟವಶಾತ್, ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಸತತ ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

**ಸ್ಥಳಕ್ಕೆ ಜನಪ್ರತಿನಿಧಿಗಳ ಭೇಟಿ:** ಘಟನೆಯ ಬಗ್ಗೆ ಮಾಹಿತಿ ತಿಳಿಯುತ್ತಿದ್ದಂತೆಯೇ ವಾರ್ಡ್ ಸದಸ್ಯರಾದ ಕೃಷ್ಣ ನಾಯಕ್ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಹಾಜಿ ಚೌದರಿ ಅವರು ಸ್ಥಳಕ್ಕೆ ಆಗಮಿಸಿ, ಸಂಬಂಧಪಟ್ಟ ಜೆಸ್ಕಾಂ (GESCOM) ಮತ್ತು ಪೌರಾಡಳಿತ ಅಧಿಕಾರಿಗಳೊಂದಿಗೆ ಮಾತನಾಡಿ ತುರ್ತು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ವಾರ್ಡ್‌ನ ಇತರ ಸದಸ್ಯರು, ಜೆಸ್ಕಾಂ ಅಧಿಕಾರಿಗಳು. ಪಟ್ಟಣ ಪಂಚಾಯತ್ ಅಧಿಕಾರಿಗಳು ಹಾಗೂ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು. ಸಮಯಪ್ರಜ್ಞೆಯಿಂದ ಬೆಂಕಿ ನಂದಿಸಿದ್ದರಿಂದ ದೊಡ್ಡ ಮಟ್ಟದ ಆಸ್ತಿ ಹಾನಿ ತಪ್ಪಿದಂತಾಗಿದೆ.

# ಪಟ್ಟಣದ ವಿವಿಧ ಮಸೀದಿಗಳಲ್ಲಿ ರಂಜಾನ್ ಇಫ್ತಾರ್ ಕೂಟ ಅಂಗವಾಗಿ ಕಾಂಗ್ರೇಸ್ ಪಕ್ಷದಿಂದ ಹಣ್ಣುಗಳ ವಿತರಣೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದಲ್ಲಿ ಮಾನ್ವಿ ಬ್ಲಾಕ್ ಕಾಂಗ್ರೆಸ್ ಪಕ್ಷದ ವತಿಯಿಂದ ಪವಿತ್ರ ರಂಜಾನ್ ಮಾಸದ ಅಂಗವಾಗಿ ವಿವಿಧ ಮಸೀದಿಗಳ ಮುಸ್ಲಿಂ ಧರ್ಮಗುರುಗಳಿಗೆ ಇಫ್ತಾರ್ ಕೂಟದ ಅಂಗವಾಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಫುರ್ ಸಾಬ್ ಹಣ್ಣುಗಳನ್ನು ವಿತರಿಸಿ ಮಾತನಾಡಿ ಪವಿತ್ರ ರಂಜಾನ್ ಮಾಸದ ಅಂಗವಾಗಿ ಮುಸ್ಲಿಂ ಸಹೋದರರು ಉಪವಾಸ ವೃತವನ್ನು ಆಚರಿಸುತ್ತಾರೆ ಅಂತಹವರಿಗಾಗಿ ಮಸೀದಿಗಳಲ್ಲಿ ಪ್ರಾರ್ಥನೆಯ ನಂತರ ನಡೆಯುವ ಇಫ್ತಾರ್ ಕೂಟಗಳಲ್ಲಿ ಸೇವನೆಗಾಗಿ ಇಂದು ಪಟ್ಟಣದ ಎಲ್ಲಾ ಮಸೀದಿಗಳಿಗೆ ತೆರಳಿ ಸೌಹಾರ್ದಯುತವಾಗಿ, ಸಹೋದರತ್ವ ಮತ್ತು ಮಾನವೀಯ ಮೌಲ್ಯಗಳನ್ನು ಗೌರವಿಸುವ ಸಲುವಾಗಿ ಕಾಂಗ್ರೆಸ್ ಪಕ್ಷದ ಮುಖಂಡರೊಂದಿಗೆ ತೆರಳಿ ಹಣ್ಣುಗಳನ್ನು ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಹಿರಿಯ ಮುಖಂಡರು ಹಾಗೂ ಎ.ಪಿ.ಎಂ.ಸಿ. ಮಾಜಿ ಸದಸ್ಯರಾದ ಶಿವರಾಜನಾಯಕ ವಕೀಲರು,ತಾ. ಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಬಿ.ಕೆ.ಅಂಬರೀಶಪ್ಪ, ರೌಡೂರು ಮಹಾಂತೇಶ್ ಸ್ವಾಮಿ,ಸೈಯದ್ ಖಾಲಿದ್ ಖಾದ್ರಿ, ಜಿ.ಪಂ. ಮಾಜಿ ಸದಸ್ಯ ಹನುಮೇಶ ಮದ್ಲಾಪುರ್, ತಾ.ಪಂ. ಮಾಜಿ ಅಧ್ಯಕ್ಷರಾದ ಚಂದ್ರಶೇಖರ್ ಕುರುಡಿ, ಹಿರಿಯ ಮುಖಂಡರಾದ ಹೊನ್ನಪ್ಪ ಹೇಳವಾರ,ರಾಜಾ ಸುಭಶ್ಚಂದ್ರನಾಯಕ, ತಿಪ್ಪಣ್ಣ ಬಾಗಲವಾಡ ವಕೀಲರು,ಬುಡುಸಾಬ್, ಸೈಯುದ್ ನಜರುದ್ದೀನ್‌ಖಾದ್ರಿ, ಹುಸೇನ್ ಬೇಗ್, ಜಮಿಲ್ ಅಹ್ಮದ್, ಚಾಂದ್‌ಪಾಶ , ಎಂ.ಡಿ .ಮುಹೆಮುದ್, ವಸಂತ್ ಕೊಡ್ಲಿ,ರೇವಣಸಿದ್ದಯ್ಯ ಸ್ವಾಮಿ,ಮಲ್ಲೇಶಿ ಜಗಲಿ, ಹೆಚ್. ಬಿ. ಎಂ ಬಾಷಾ, ಸುಕುಮುನಿ, ಮಹೆಬೂಬ್‌ಸಾಬ್ , ಡಿ. ವೀರೇಶ್, ಸತ್ತಾರ ಬಂಗ್ಲೆವಾಲೆ, ಸೂರ್ಯನಾರಾಯಣ ಯಾದವ್, ಕನಕಪ್ಪ ಯಾದವ್, ಹನುಮಂತ್‌ರಾಯನಾಯಕ್, ಕಾಮೇಶ್, ಹಂಪಯ್ಯ ನಾಯಕ್, ಕೆ .ಸಮೀರ್,ಸಲೀಂ ಪಾಷಾ, ಫಯಾಜ್ ,ಆಂಜನೇಯ ಸೇರಿದಂತೆ ಇನ್ನಿತರರು ಇದ್ದರು.

# ಬ್ಯಾಗವಾಟ್ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹೆಚ್.ಪಿ.ವಿ.ಲಸಿಕೆ ಕಾರ್ಯಕ್ರಮ: ಡಾ.ಸುರೇಶ್ ಹೊನ್ನಾಳ್ಳಿ



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಬ್ಯಾಗವಾಟ್ ಗ್ರಾಮದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಹೆಚ್.ಪಿ.ವಿ.ಲಸಿಕೆ ಕಾರ್ಯಕ್ರಮವನ್ನು ಶಾಲಾ ವಿದ್ಯಾರ್ಥಿಗೆ ಹೆಚ್.ಪಿ.ವಿ.ಲಸಿಕೆ ಹಾಕುವ ಮೂಲಕ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ.ಸುರೇಶ್ ಹೊನ್ನಾಳ್ಳಿ ಚಾಲನೆ ನೀಡಿ ಮಾತನಾಡಿ ಮಹಿಳೆಯರಲ್ಲಿ ಹೆಚ್ಚಾಗಿ ಕಂಡುಬರುವ ಗರ್ಭಕಂಠದ ಕ್ಯಾನ್ಸರ್ ವೈರಸ್ ನಿಂದ ಬರುತ್ತದೆ ಇದನ್ನು ತಡೆಯುವುದಕ್ಕಾಗಿ ಹ್ಯೂಮನ್ ಪ್ಯಾಪಿಲೋಮ ವೈರಸ್ ಲಸಿಕೆಯನ್ನು 14 ವರ್ಷದ ಹೆಣ್ಣು ಮಕ್ಕಳಿಗೆ ನೀಡುವುದರಿಂದ ಗರ್ಭಕಂಠದ ಕ್ಯಾನ್ಸರ್ ಸೇರಿದಂತೆ ಇತರ ಕ್ಯಾನ್ಸರ್‌ಗಳನ್ನು ಬರದಂತೆ ತಡೆಯುವುದಕ್ಕೆ ಸಾಧ್ಯವಿದೆ ಎನ್ನುವ ಉದ್ದೇಶದಿಂದ ಆರೋಗ್ಯ ಇಲಾಖೆಯ ಮೂಲಕ ಉಚಿತವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಲಸಿಕೆಯನ್ನು ನೀಡಲಾಗುತ್ತಿದೆ ಅದ್ದರಿಂದ ಪಾಲಕರು ತಮ್ಮ 14 ವರ್ಷದೊಳಗಿನ ಬಾಲಕಿಯರಿಗೆ ಹೆಚ್.ಪಿ.ವಿ.ಲಸಿಕೆಯನ್ನು ಕೊಡಿಸುವ ಮೂಲಕ ಗರ್ಭಕಂಠದ ಕ್ಯಾನ್ಸರ್ ಬರದಂತೆ ಮುಂಜಾಗ್ರತೆಯನ್ನು ವಹಿಸುವಂತೆ ತಿಳಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರ ಬ್ಯಾಗವಾಟನ ಫಾರ್ಮಾಸಿಸ್ಟ್ ಅಧಿಕಾರಿ ಉಪೇಂದ್ರ , ಪ್ರಾಥಮಿಕ ಆರೋಗ್ಯ ಸುರಾಕ್ಷ ಅಧಿಕಾರಿಗಳಾದ ಶಿವಮ್ಮ,ಶಂಕ್ರಮ್ಮ, ಅಮರಮ್ಮ,ವೆಂಕಟಮ್ಮ, ಅಶಾಕಾರ್ಯಕಾರ್ತೆಯರಾದ ಅನುಸೂಯ ಮಹಾಲಕ್ಷೀ, ಗ್ರಾಮ ಪಂಚಾಯಿತಿ ಅಧಿಕಾರಿಗಳು, ಶಾಲಾ ಶಿಕ್ಷಕರು, ವಿದ್ಯಾರ್ಥಿನಿಯರು, ತಾಯಂದಿರು. ಭಾಗವಹಿಸಿದರು.

# ಲೋಕಾ ಬಲೆಗೆ ಉಡುಪಿ ಅಬಕಾರಿ ಡಿಸಿ 8.96 ಕೋಟಿ ಆಸ್ತಿಪತ್ತೆ

**ಉಡುಪಿ,ಮಾ.14–** ಅಕ್ರಮ ಆಸ್ತಿ ಗಳಿಕೆ ಹಿನ್ನೆಲೆಯಲ್ಲಿ ಜಿಲ್ಲಾ ಅಬಕಾರಿ ಉಪ ಆಯುಕ್ತ (ಡಿಸಿ) ಶ್ರೀನಿವಾಸ್ ಟಿ. ಎಂ. ಅವರಿಗೆ ಸಂಬಂಧಿಸಿದ 15 ವಿವಿಧ ಸ್ಥಳಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿ 8.69 ಕೋಟಿ ಮೌಲ್ಯದ ಆಸ್ತಿ ಪಾಸ್ತಿ ಪತ್ತೆ ಹಚ್ಚಿದ್ದಾರೆ.

ದಾಳಿಯಲ್ಲಿ ಸ್ಥಿರ ಆಸ್ತಿಗಳು ಒಟ್ಟು 6,90,64,716 ರೂ. ಇದರಲ್ಲಿ ವಿವಿಧೆಡೆ 11 ನಿವೇಶನಗಳು ಇವೆ. 6 ಸುಸಜ್ಜಿತ ವಾಸದ ಮನೆಗಳು ಇದೆ. 31 ಎಕರೆ ಕೃಷಿ ಭೂಮಿ ಪತ್ತೆಯಾಗಿದೆ.

ಚರಾಸ್ತಿಗಳು ಒಟ್ಟು 2,66,90,001 ರೂ. ಇದರಲ್ಲಿ 3,95,941 ಹಣ, 1.47 ಕೋಟಿ ರೂ. ಮೌಲ್ಯದ ಚಿನ್ನದ ಆಭರಣಗಳು, 17 ಲಕ್ಷ ರೂ. ಬೆಲೆಬಾಳುವ ಕಾರುಗಳು, 25.75 ಲಕ್ಷ ರೂ. ನಗದು ಠೇವಣಿ, 72.68 ಲಕ್ಷ ರೂ. ಮೌಲ್ಯದ ಬೆಲೆಬಾಳುವ ಗೃಹೋಪಯೋಗಿ ವಸ್ತುಗಳು ಪತ್ತೆಯಾಗಿದೆ.

ಡಿಸಿ ಶ್ರೀನಿವಾಸ್ ಅವರು ತಮ್ಮ ಆದಾಯಕ್ಕಿಂತಲೂ ನೂರಾರು ಪಟ್ಟು ಹೆಚ್ಚಿನ ಆಸ್ತಿ ಹೊಂದಿದ್ದಾರೆ ಎಂಬ ಖಚಿತ ಮಾಹಿತಿಯ ಮೇರೆಗೆ ಲೋಕಾಯುಕ್ತ ಪೊಲೀಸರು ಈ ದಾಳಿಯನ್ನು ನಡೆಸಿದ್ದಾರೆ. ಮಂಗಳೂರು, ಉಡುಪಿ ಸೇರಿದಂತೆ ರಾಜ್ಯದ 15 ಕಡೆಗಳಲ್ಲಿ ಏಕಕಾಲಕ್ಕೆ ಎರಡು ದಿನಗಳ ಕಾಲ ಈ ಶೋಧ ಕಾರ್ಯ ನಡೆದಿದೆ. ಲೋಕಾಯುಕ್ತ ಪೊಲೀಸರು ಶ್ರೀನಿವಾಸ್ ಟಿ. ವಿರುದ್ಧ ಅಕ್ರಮ ಆಸ್ತಿ ಗಳಿಕೆ ಪ್ರಕರಣವನ್ನು ಈಗಾಗಲೇ ದಾಖಲಿಸಿಕೊಂಡಿದ್ದು,ಕಳೆದ ಮಾರ್ಚ್ 13ರಿಂದ ತನಿಖೆ ಆರಂಭವಾಗಿದೆ.



ಸಾಮಾನ್ಯವಾಗಿ ಲೋಕಾಯುಕ್ತ ದಾಳಿಯಲ್ಲಿ ಇಷ್ಟು ದೊಡ್ಡ ಮಟ್ಟದ ಅಕ್ರಮ ಆಸ್ತಿ ಪತ್ತೆಯಾದಾಗ, ಸಂಬಂಧಪಟ್ಟ ಇಲಾಖೆಯು (ಅಬಕಾರಿ ಇಲಾಖೆ) ಲೋಕಾಯುಕ್ತ ವರದಿಯನ್ನು ಆಧರಿಸಿ ಅಧಿಕಾರಿಯನ್ನು ಅಮಾನತುಮಾಡುವುದು ವಾಡಿಕೆ. ಶ್ರೀನಿವಾಸ್ ಅವರ ವಿರುದ್ಧದ ತನಿಖೆ ಇನ್ನೂ ಪ್ರಾಥಮಿಕ ಹಂತದಲ್ಲಿದ್ದು, ಲೋಕಾಯುಕ್ತರು ಸರ್ಕಾರಕ್ಕೆ ನೀಡುವ ಪ್ರಾಥಮಿಕ ವರದಿಯ ಆಧಾರದ ಮೇಲೆ ಮುಂದಿನ ಒಂದೆರಡು ದಿನಗಳಲ್ಲಿ ಅಮಾನತು ಆದೇಶ ಹೊರಬರುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ದಾಳಿಯ ವೇಳೆ ಪತ್ತೆಯಾದ 31 ಎಕರೆ ಕೃಷಿ ಜಮೀನು, 6 ಮನೆಗಳು ಮತ್ತು 11 ನಿವೇಶನಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಅಧಿಕಾರಿಗಳು ಕೂಲಂಕಷವಾಗಿ ಪರಿಶೀಲಿಸುತ್ತಿದ್ದಾರೆ.

ಲೋಕಾಯುಕ್ತ ಮಂಗಳೂರು ವಿಭಾಗದ ಎಸ್ಪಿ ದಿನೇಶ್ ಕುಮಾರ್ ಅವರ ನೇತೃತ್ವದಲ್ಲಿ ದಾಳಿ ನಡೆದಿದೆ.

# ತಾಪಮಾನ ಹೆಚ್ಚಳಕ್ಕೆ ಪರಿಸರ ಮಾಲಿನ್ಯ ಕಾರಣ




**ಬೀದರ್: ಮಾ.14:**ದಿನೇ ದಿನೇ ತಾಪಮಾನ ಹೆಚ್ಚಳಕ್ಕೆ ಪರಿಸರ ಮಾಲಿನ್ಯವೇ ಕಾರಣವಾಗಿದೆ ಎಂದು ರಾಜ್ಯ ಸಂಪನ್ಮೂಲ ವ್ಯಕ್ತಿ ಶಾಂತಕುಮಾರ ಹುಮನಾಬಾದೆ ಹೇಳಿದರು.
ಬೀದರ್ ತಾಲ್ಲೂಕಿನ ಯರನಳ್ಳಿ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆ ಹಾಗೂ ಸಿ.ವಿ. ರಾಮನ್ ಇಕೋ ಕ್ಲಬ್ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಪರಿಸರ ಸಂರಕ್ಷಣೆ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.
ಭೂ, ಶಬ್ದ, ಜಲ ಮಾಲಿನ್ಯದಿಂದ ಮನುಷ್ಯನ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗಲಿದೆ ಎಂದು ತಿಳಿಸಿದರು.
ಎಲ್ಲರೂ ಪರಿಸರ ಸಂರಕ್ಷಣೆಗೆ ಮುಂದಾಗಬೇಕಿದೆ ಎಂದರು.
ವಿಶೇಷ ಉಪನ್ಯಾಸ ನೀಡಿದ ಬಲವಂತರಾವ್ ರಾಠೋಡ್ ಅವರು, ಅತಿಯಾದ ಪ್ಲಾಸ್ಟಿಕ್ ಬಳಕೆ ಕೂಡ ಭೂ ಮಾಲಿನ್ಯಕ್ಕೆ ಕಾರಣವಾಗುತ್ತಿದೆ ಎಂದು ಹೇಳಿದರು.
ಅಧ್ಯಕ್ಷತೆ ವಹಿಸಿದ್ದ ಮುಖ್ಯಶಿಕ್ಷಕ ಮಚ್ಚೇಂದ್ರ ಗಾಯಕವಾಡ್ ಮಾತನಾಡಿದರು.
ಎಸ್.ಡಿ.ಎಂ.ಸಿ. ಅಧ್ಯಕ್ಷ ಸಲೀಂಖಾನ್, ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಕಾರಬಾರಿ, ರಂಜನಿ, ಸುರೇಖಾ, ರಮಾಬಾಯಿ ಯರನಳ್ಳಿಕರ್, ಓಂಶ್ರೀ ಪಾಂಚಾಳ್ ಇದ್ದರು.
ರಮೇಶ ಪ್ರಸ್ತಾವಿಕವಾಗಿ ಮಾತನಾಡಿದರು. ಶಾಮಸುಂದರ ಖಾನಾಪುರಕರ್ ಸ್ವಾಗತಿಸಿದರು. ಶಿಕ್ಷಕ ಪಾಂಡುರಂಗ ಬೆಲ್ದಾರ್ ನಿರೂಪಿಸಿದರು. ಹೇಮಲತಾ ವಂದಿಸಿದರು.

# ದುರ್ಬಲರ ಬಾಳಿನಲ್ಲಿ ಬೆಳಕು ನೀಡಿದ ಪಂಚ ಗ್ಯಾರಂಟಿ ಯೋಜನೆ ; ಅರುಣಕುಮಾರ ಪಾಟೀಲ

**ಅಫಜಲಪುರ ; ಮಾ.14:** ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಯೂ ದುರ್ಬಲರ ಬಾಳಿನಲ್ಲಿ ಬೆಳಕು ನೀಡಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ ಪಾಟೀಲ್ ಹೇಳಿದರು.

ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಗ್ಯಾರಂಟಿ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿ, ಶೀಘ್ರದಲ್ಲೇ ತಾಲೂಕು ಹಂತದಲ್ಲಿ ಗ್ಯಾರಂಟಿ ಫಲಾನುಭವಿಗಳ ಬೃಹತ್ ಸಮಾವೇಶ ನಡೆಸಲಾಗುವುದು, ಸಮಾರಂಭದ ಯಶಸ್ಸಿಗೆ ಪ್ರತಿಯೊಬ್ಬರೂ ಶ್ರಮಿಸಬೇಕು. ಕಾಂಗ್ರೆಸ್ ಪಕ್ಷ ಮೊದಲು ಗ್ಯಾರಂಟಿ ಯೋಜನೆ ಜಾರಿಗೆ ತಂದಾಗ ಎಲ್ಲರೂ ವಿರೋಧಿಸಿದರೆ, ಬಳಿಕ ಎಲ್ಲರೂ ನಮ್ಮ ಯೋಜನೆಗಳನ್ನೇ ಜಾರಿ ಮಾಡುತ್ತಿದ್ದಾರೆ.
ಜನಪರ ಮತ್ತು ಅಭಿವೃದ್ಧಿಪರ ಕಾರ್ಯಕ್ಕೆ ಸರ್ಕಾರ ಬದ್ಧವಾಗಿದೆ ಎಂದರು.

ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಪ್ರಕಾಶ ಜಮಾದಾರ ಮಾತನಾಡಿ, ತಾಲೂಕಿನಾದ್ಯಂತ ಗೃಹಜ್ಯೋತಿ ಅಡಿಯಲ್ಲಿ 43,212 ಫಲಾನುಭವಿಗಳಿಗೆ 52.88 ಕೋಟಿ ರೂ., ಯುವನಿಧಿಯಡಿ 3,082 ವಿದ್ಯಾರ್ಥಿಗಳಿಗೆ 6.54 ಕೋಟಿ ರೂ, ಅನ್ನಭಾಗ್ಯದಡಿ 50,972 ಪಡಿತರರಿಗೆ 1,884 ಟನ್ ಆಹಾರ ಧಾನ್ಯ, ಶಕ್ತಿ ಯೋಜನೆಯಡಿ 1,45,000 ಸ್ತ್ರೀ ಪ್ರಯಾಣಿಕರಿಗೆ 59.24 ಕೋಟಿ ರೂ., ಗೃಹಲಕ್ಷ್ಮಿಯಡಿ 51,728 ಫಲಾನುಭವಿಗಳಿಗೆ 10.34 ಕೋಟಿ ರೂ.
ವ್ಯಯಿಸಲಾಗಿದೆ. ಇಡೀ ಜಿಲ್ಲೆಗೆ ಗ್ಯಾರಂಟಿ ಯೋಜನೆಯಡಿ 2,500 ಕೋಟಿ ರೂ. ಹಣ ನಮ್ಮ ಸರ್ಕಾರ ನೀಡಿದೆ ಎಂದು ತಿಳಿಸಿದರು.

ತಾಪಂ ಇಒ ವೀರಣ್ಣ ಕೌಲಗಿ ಮಾತನಾಡಿದರು. ಪ್ರಮುಖರಾದ ಅಂಬರೀಶ ಬುರಲಿ, ದತ್ತು
ಘಾರ, ರಾಜಕುಮಾರ ಬಬಲಾದ, ಪ್ರವೀಣ ಕಲ್ಲೂರ, ಸುಧಾಕರ ಎಸ್.ಕೆ., ಗುರುಕಿರಣ ಮಾಸ್ಟರ್, ಅನುಸುಯಾ ಸುಲೇಕರ, ನಿಂಗಣ್ಣ ಎಸ್., ಪ್ರವೀಣ ಹೇರೂರ, ಎ.ಎ.ಭೋವಿ,

ಖೈಮುದ್ದಿನ್, ಚಿದಾನಂದ ಕೊಳ್ಳಿ ಇತರರಿದ್ದರು.



ರಾಜ್ಯ ಸರ್ಕಾರ ಪ್ರಸಕ್ತ ಆಯವ್ಯಯದಲ್ಲಿ ಕ್ಷೇತ್ರಕ್ಕೆ ಭರಪುರ ಕೊಡುಗೆ ನೀಡಿದೆ. ಅಫಜಲಪುರದಲ್ಲಿ ಒಳ ಚರಂಡಿ ಅಭಿವೃದ್ಧಿಗೆ ಸುಮಾರು 150 ಕೋಟಿ ರೂ., ಕಾರ್ಮಿಕ, ಶ್ರಮಿಕರ ಮಕ್ಕಳಿಗೆ ವಸತಿ ಶಾಲೆಗೆ 35 ಕೋಟಿ ರೂ., ಗ್ರಾಮೀಣ ರಸ್ತೆಗೆ 21 ಕೋಟಿ ರೂ., ಪಿಎಂ ಮಿತ್ರ ಪಾರ್ಕ್ ಅಭಿವೃದ್ಧಿಗೆ 75 ಕೋಟಿ ರೂ. ನೀಡಲಾಗಿದೆ.

ಅರುಣಕುಮಾರ ಪಾಟೀಲ್ ಅಧ್ಯಕ್ಷರು, ಕೆಕೆಆರ್ಟಿಸಿ
ಸರ್ಕಾರ ಯೋಜನೆಯ ಬಗ್ಗೆ ಟೀಕಿಸಿದ
ಆಹಾರ ನಿರೀಕ್ಷಕನ ವಿರುದ್ಧ ಕ್ರಮ.

ರಾಜ್ಯ ಸರ್ಕಾರ ಯೋಜನೆಗಳನ್ನು ಟೀಕಿಸಿದ ಅಫಜಲಪುರದ ಆಹಾರ ನಿರೀಕ್ಷಕ ಹರಿದಾಸ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರು ಒತ್ತಾಯಿಸಿದ ಪ್ರಸಂಗ ಶುಕ್ರವಾರ ನಡೆಯಿತು. ಸರ್ಕಾರಿ ನೌಕರನಾಗಿ ಸೋಷಿಯಲ್ ಮಿಡಿಯಾದಲ್ಲಿ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳ ಕುರಿತು ಅವಹೇಳನಕಾರಿಯಾಗಿ ಬರಹ ಹಂಚಿಕೊಂಡಿದ್ದಾರೆ. ಹೀಗಾಗಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಈ ವೇಳೆ ಕೆಕೆಆರ್‌ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ್, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಪ್ರಕಾಶ ಜಮಾದಾರ ಮಧ್ಯಪ್ರವೇಶಿಸಿ, ಅಧಿಕಾರಿ ವಿರುದ್ಧ ಸೂಕ್ತ ಕ್ರಮವಹಿಸಲು ಇಲಾಖೆಗೆ ಸೂಚಿಸಲಾಗುತ್ತದೆ ಎಂದು ಹೇಳಿದರು.

ಮೊದಲನೇ ಪುಟದಿಂದ

# ಒಳಮೀಸಲಾತಿ ಗೊಂದಲ ಶೀಘ್ರ ಇತ್ಯರ್ಥ

ತಂದೆಯವರು ಶ್ರೀಮತಕ್ಕೆ ನಡೆದುಕೊಳ್ಳುತ್ತೇವೆ. ಹಾಗಾಗಿ ಆಗಿಂದ್ದಾಗೆ ಮಠಕ್ಕೆ ಬಂದು ದರ್ಶನ ಮಾಡಿಕೊಂಡು ಹೋಗುತ್ತೇವೆ. ಅವರು ರಾಜಕೀಯವಾಗಿ ಯಾವುದೇ ಮಾರ್ಗದರ್ಶನ ಕೊಡುವುದಿಲ್ಲ. ದೊಡ್ಡ ಸ್ವಾಮೀಜಿಯವರು ಕೂಡ ರಾಜಕೀಯವಾಗಿ ನಾವು ಏನಾದರೂ ಕೇಳಿದರೆ ಮೌನ ವಹಿಸುತ್ತಿದ್ದರು. ಹಾಗೆಯೇ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿಗಳು ಅಷ್ಟೇ, ನಾವು ರಾಜಕೀಯ ಕೇಳಲ್ಲ ಅಕಸ್ಮಾತ್ ಮಾತನಾಡಿದರೆ ಮೌನ ವಹಿಸಿ ನಕ್ಕು ಬಿಡ್ತಾರೆ. ನಮಗೆ ಪದ್ಧತಿ, ಸ್ಫೂರ್ತಿ, ಮನಃಶಾಂತಿಗಾಗಿ ಇಲ್ಲಿಗೆ ಬರುತ್ತೇವೆ ಎಂದು ಅವರು ಹೇಳಿದರು.

ಮಾ. 18 ರಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆ ಆರಂಭವಾಗುತ್ತಿದೆ. ಶ್ರೀಮಠದಲ್ಲಿ 1200 ಮಕ್ಕಳು ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯಲಿದ್ದಾರೆ. ಹಾಗಾಗಿ ಅವರನ್ನೆಲ್ಲಾ ಮಾತನಾಡಿಸಿ ಪರೀಕ್ಷೆಯನ್ನು ಚೆನ್ನಾಗಿ ಬರೆಯುವಂತೆ ಶುಭ ಕೋರಿದ್ದೇನೆ ಎಂದರು.

ವಡೇರಹಳ್ಳಿಯಲ್ಲಿ ಬಫರ್ ಡ್ಯಾಂ ನಿರ್ಮಾಣ-ಎತ್ತಿನ ಹೊಳೆಯ ಮೂಲ ಯೋಜನೆಯಂತೆ ವಡೇರಹಳ್ಳಿಯಲ್ಲೇ ಡ್ಯಾಂ ನಿರ್ಮಾಣ ಮಾಡಲಾಗುವುದು. ಇದು ವಡೇರಹಳ್ಳಿ, ತುಮಕೂರು ಜಿಲ್ಲೆ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಗಡಿ ಭಾಗವಾಗಿದೆ. ವಡೇರೆಹಳ್ಳಿಯ ಎರಡೂವರೆ ಹಾಗೂ ಚಿಕ್ಕಬಳ್ಳಾಪುರದ ಗಡಿಯ ಎರಡೂವರೆ ಒಟ್ಟು 5 ಸಾವಿರ ಎಕರೆಯಲ್ಲಿ ಬಫರ್ ಡ್ಯಾಂ ನಿರ್ಮಾಣ ಮಾಡಲಾಗುತ್ತದೆ. ಆದರೆ ಹಿಂದಿನ ಬಿಜೆಪಿ ಸರ್ಕಾರ ಮೂಲ ಪ್ಲ್ಯಾನ್ ಬದಲಿಸಿ ಬೈರಗೊಂಡ್ಲುವಿನಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿತ್ತು. ಆದರೆ ನಮ್ಮ ಸರ್ಕಾರ ಮೂಲ ಪ್ಲ್ಯಾನ್ ನಂತೆ ವಡೇರಹಳ್ಳಿಯಲ್ಲಿ ಮಾಡಲು ಬಜೆಟ್ ನಲ್ಲಿ ಘೋಷಣೆ ಮಾಡಿದ್ದೇವೆ ಎಂದರು.
ಇದಕ್ಕೆ ಸ್ಥಳೀಯರ ವಿರೋಧವಿದ್ದರೂ ಅವರನ್ನು ಕೂರಿಸಿ ಮಾತನಾಡಿಸಿ ಸಮಸ್ಯೆ ಬಗೆಹರಿಸುತ್ತೇವೆ. ಬೈರಗೊಂಡ್ಲು ರೈತರು ವಿರೋಧ ವ್ಯಕ್ತಪಡಿಸಿದ್ದರಿಂದ ಈಗ ವಡೇರಹಳ್ಳಿಯಲ್ಲೇ ನಿರ್ಮಾಣ ಮಾಡಲಾಗುತ್ತದೆ. ಒಂದೂವರೆ ಟಿಎಂಸಿ ನೀರನ್ನು ಅಲ್ಲಿ ಶೇಖರಣೆ ಮಾಡಲಾಗುತ್ತದೆ. ಏನಾದರೂ ಪ್ರಯತ್ನ ಮಾಡಿ ಅವರನ್ನು ಮನವೊಲಿಸಿ ಮಾಡುತ್ತೇವೆ. ಅವರಿಗೆ ಪರ್ಯಾಯವಾಗಿ ಏನಾದರೂ ಕಲ್ಪಿಸಿ ಸಮಸ್ಯೆ ಬಗೆಹರಿಸುತ್ತೇವೆ ಎಂದು ಅವರು ತಿಳಿಸಿದರು.

# ಬ್ಲ್ಯಾಕ್‌ಮೇಲ್ ಮಾಡುವುದು ನನ್ನ ಪ್ರವೃತ್ತಿ ಅಲ್ಲ: ದೀಪಕ್ ಪಾಟೀಲ ಚಾಂದೋರಿ



**ಬೀದರ್: ಮಾ.14:**ಅಂಗನವಾಡಿಗಳಿಗೆ ಪೌಷ್ಟಿಕ ಆಹಾರ ಪೂರೈಸುವಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಬಗ್ಗೆ ಸುಂದ್ರಮ್ಮ ಟ್ರೇಡಿಂಗ್ ಕಂಪನಿ ಸತ್ಯ ಮರೆ ಮಾಚಲು ಪ್ರಯತ್ನಿಸುತ್ತಿದೆ ಎಂದು ಔರಾದನ ಮುಖಂಡ ದೀಪಕ್ ಪಾಟೀಲ ಚಾಂದೋರಿ ಆರೋಪಿಸಿದ್ದಾರೆ.
ಜನರ ದಿಕ್ಕು ತಪ್ಪಿಸಲು ಕಂಪನಿಯ ನಾಗೇಶ ಕಂಟೆಪ್ಪ ಜೀರ್ಗೆ ನಾನು ಬ್ಲ್ಯಾಕ್‌ಮೇಲ್‌ಗಾಗಿ ದೂರು ಕೊಟ್ಟಿದ್ದೇನೆ ಎಂದು ಸುಳ್ಳು ಹೇಳಿಕೆ ನೀಡಿದ್ದಾರೆ ಎಂದು ತಿಳಿಸಿದ್ದಾರೆ.
ನಾನು ಸತ್ಯದ ಪರವಾಗಿ ಹೋರಾಟ ನಡೆಸುತ್ತಿದ್ದೇನೆ. ಶಾಸಕರ ಭ್ರಷ್ಟಾಚಾರದ ವಿರುದ್ಧ ಲೋಕಾಯುಕ್ತಕ್ಕೆ ದೂರು ಕೊಟ್ಟಿದ್ದರಿಂದ ನನ್ನ ಚಾರಿತ್ರ್ಯ ವಧೆಗೆ ಪ್ರಯತ್ನಿಸಲಾಗುತ್ತಿದೆ. ಇಲ್ಲಸಲ್ಲದ ಆರೋಪ ಹೊರೆಸಲಾಗುತ್ತಿದೆ. ಆದರೆ, ಹುಸಿ ಹೇಳಿಕೆ, ಹೆದರಿಕೆ ತಂತ್ರಗಳಿಗೆ ನಾನು ಜಗ್ಗುವುದಿಲ್ಲ. ಭ್ರಷ್ಟಾಚಾರ ಪ್ರಕರಣದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ಆಗುವವರೆಗೆ ನನ್ನ ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಸಿದ್ದಾರೆ.
ಬೆದರಿಸುವುದು, ಬ್ಲ್ಯಾಕ್‌ಮೇಲ್ ಮಾಡುವುದು ಔರಾದ್ ಶಾಸಕರ ಪ್ರವೃತ್ತಿಯಾಗಿದೆಯೇ ವಿನಃ ನನ್ನದಲ್ಲ. ಗುತ್ತಿಗೆದಾರರ ಹೆಸರನ್ನು ಕಪ್ಪು ಪಟ್ಟಿಗೆ ಸೇರಿಸುವುದು, ವಿಧಾನಸೌಧದಲ್ಲಿ ಅವರ ಕಾಮಗಾರಿ ಬಗ್ಗೆ ಪ್ರಶ್ನಿಸುವುದು, ಬಳಿಕ ಹಣ ಅವರಿಂದ ಪಡೆದು ಸುಮ್ಮನಾಗುವುದು ಶಾಸಕರ ಕೆಲಸವಾಗಿದೆ. ಜನರ ಮಧ್ಯೆ ಅಧಿಕಾರಿಗಳನ್ನು ಬೈಯುವುದು, ನಂತರ ತಮ್ಮ ಜನ್ಮದಿನ ಹಾಗೂ ಇತರ ಕಾರ್ಯಕ್ರಮಗಳಲ್ಲಿ ಅವರಿಂದ ಉಡುಗೊರೆ ಪಡೆಯುವುದು ಕೂಡ ಶಾಸಕರ ಕಾಯಕವಾಗಿದೆ. ಇದ್ಯಾವುದರ ಮಾಹಿತಿ ಇಲ್ಲದ ನಾಗೇಶ ಜೀರ್ಗೆ ಅವರು ಶಾಸಕರನ್ನು ಮೆಚ್ಚಿಸಲು ಅವರ ಪರವಾಗಿ ಹೇಳಿಕೆ ಕೊಟ್ಟಿದ್ದಾರೆ ಎಂದು ಟೀಕಿಸಿದ್ದಾರೆ.
ಔರಾದ್ ವಿಧಾನಸಭಾ ಕ್ಷೇತ್ರದ ಅಂಗನವಾಡಿಗಳಿಗೆ ಆಹಾರ ಧಾನ್ಯ ಪೂರೈಸುವ ಟೆಂಡರ್ ಕೊಡಿಸುವುದಕ್ಕೆ ಸಂಬಂಧಿಸಿದಂತೆ ಔರಾದ್ ಶಾಸಕರು ಹಾಗೂ ಸುಂದ್ರಮ್ಮ ಟ್ರೇಡಿಂಗ್ ಕಂಪನಿ ಮಧ್ಯೆ ಆದ ಒಳ ಒಪ್ಪಂದ, ಕಂಪನಿ ಖಾತೆಯಿಂದ ಶಾಸಕರ ಮಾಲೀಕತ್ವದ ಮುಂಬೈನ ಪ್ರಭು ಎಂಟರ್‌ಪ್ರೈಸೆಸ್ ಖಾತೆಗೆ ಹಣ ಜಮೆ ಆಗಿರುವ ಆಧಾರದಲ್ಲಿಯೇ ದಾಖಲೆ ಸಮೇತ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದೇನೆ. ನಾಗೇಶ ಜೀರ್ಗೆ ತಮ್ಮದೇನಾದರೂ ಸ್ಪಷ್ಟೀಕರಣ ಕೊಡುವುದಿದ್ದರೆ ತನಿಖೆ ವೇಳೆ ಲೋಕಾಯುಕ್ತರಿಗೆ ಕೊಡಲಿ. ಅದನ್ನು ಬಿಟ್ಟು ನನ್ನ ವಿರುದ್ಧ ತಲೆ ಬುಡವಿಲ್ಲದ ಹೇಳಿಕೆ ನೀಡಿರುವುದು ಸರಿಯಲ್ಲ ಎಂದು ತಿಳಿಸಿದ್ದಾರೆ.
ನಾನು ಯಾವುದೇ ಅಕ್ರಮ ಎಸಗಿಲ್ಲ. ನಾನು ಏನಿದ್ದೇನೆ ಎಂಬುದು ಜಿಲ್ಲೆಯ ಜನರಿಗೆ ಗೊತ್ತಿದೆ. ನನ್ನ ವಿರುದ್ಧದ ಅವರ ಅಪಪ್ರಚಾರದ ತಂತ್ರ ಫಲಿಸುವುದಿಲ್ಲ ಎಂದು ಹೇಳಿದ್ದಾರೆ.
ಸುಂದ್ರಮ್ಮ ಟ್ರೇಡಿಂಗ್ ಕಂಪನಿಯ ನಾಗೇಶ ಜೀರ್ಗೆ ವೃತ್ತಿಯಲ್ಲಿ ಎಂಜಿನಿಯರ್ ಇದ್ದಾರೆ. ಸದ್ಯ ಬೆಂಗಳೂರಿನಲ್ಲಿ ನೆಲೆಸಿದ್ದಾರೆ. 2021 ರಲ್ಲಿ ಆರಂಭವಾದ ಮಲ್ಲಮ್ಮ ಜೀರ್ಗೆ ಅವರ ಮಾಲೀಕತ್ವದ ಸುಂದ್ರಮ್ಮ ಟ್ರೇಡಿಂಗ್ ಕಂಪನಿ ಐಸಿಡಿಎಸ್ ಯೋಜನೆ ಅನ್ವಯ ಬಿ.ಐ.ಎಸ್. ಸರ್ಟಿಫಿಕೇಟ್ ಹೊಂದಿಲ್ಲ ಎಂದು ಆಪಾದಿಸಿದ್ದಾರೆ.
ಶಾಸಕ ಪ್ರಭು ಚವಾಣ್ ಅವರು ತಮ್ಮ ಹೊಲದಲ್ಲಿ ಬೆಳೆದ ಉದ್ದು, ಹೆಸರು, ಕಡಲೆ, ಸೋಯಾಬೀನ್ ಹಾಗೂ ಇತರ ಬೆಳೆಗಳನ್ನು ಸುಂದ್ರಮ್ಮ ಟ್ರೇಡಿಂಗ್ ಕಂಪನಿಯ ಅಂಗಡಿಗೆ ಮಾರಾಟ ಮಾಡುತ್ತಾರೆ ಎಂದು ನಾಗೇಶ ಜೀರ್ಗೆ ತಿಳಿಸಿದ್ದಾರೆ. ಇದರಿಂದ ಕಂಪನಿಯಿಂದ ಶಾಸಕರ ಮಾಲೀಕತ್ವದ ಖಾತೆಗೆ ಹಣ ಹಾಕಿರುವುದನ್ನು ಅವರೇ ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ.
ಸುಂದ್ರಮ್ಮ ಟ್ರೇಡಿಂಗ್ ಕಂಪನಿಯಿಂದ 2023 ರಲ್ಲಿ ಎರಡು ತಿಂಗಳ ಅವಧಿಯಲ್ಲೇ ರೂ. 80 ಲಕ್ಷ ಪ್ರಭು ಎಂಟರ್‌ಪ್ರೈಸೆಸ್ ಖಾತೆಗೆ ಜಮೆ ಮಾಡಲಾಗಿದೆ.
2023 ರ ಚುನಾವಣೆ ವೇಳೆ ಶಾಸಕ ಪ್ರಭು ಚವಾಣ್ ನೀಡಿದ ಆಸ್ತಿ ವಿವರದ
ಪ್ರಕಾರ, 2022-23 ರಲ್ಲಿ ಅವರಿಗೆ ವೇತನ, ಇತರ ಮೂಲಗಳಿಂದ ರೂ. 49 ಲಕ್ಷ ಆದಾಯ ಬಂದಿದೆ. ಆದರೆ, ಇದೀಗ ಕೃಷಿ ಉತ್ಪನ್ನ ಮಾರಾಟದಿಂದಲೇ ಅವರ ಖಾತೆಗೆ ರೂ. 80 ಲಕ್ಷ ಹೋಗಿದೆ. ಹಾಗಾದರೆ, ಶಾಸಕರು ಚುನಾವಣೆ ಸಂದರ್ಭದಲ್ಲಿ ಸಲ್ಲಿಸಿದ ಮಾಹಿತಿ ಸುಳ್ಳಾಗಿದೆ ಎಂದು ಹೇಳಿದ್ದಾರೆ.
ಶಾಸಕರು ಹಾಗೂ ಶಾಸಕರ ಪತ್ನಿ ಹೆಸರಲ್ಲಿ 9 ಎಕರೆ ಕೃಷಿ ಭೂಮಿ ಇದೆ. ಇದರಲ್ಲಿ 3 ಎಕರೆ ಕಬ್ಬು ಇದೆ ಎಂದು ಆಸ್ತಿ ವಿವರದಲ್ಲಿ ತೋರಿಸಲಾಗಿದೆ. ಹಾಗಾದರೆ, 6 ಎಕರೆಯಲ್ಲೇ ಕೃಷಿಯಿಂದ ಅವರಿಗೆ ರೂ. 80 ಲಕ್ಷ ಆದಾಯ ಬಂದಿತೇ?, ಇಷ್ಟೊಂದು ಆದಾಯ ಬರಲು ಅವರು ಬೆಳೆಗಳ ಯಾವ ತಳಿ, ಯಾವ ತಂತ್ರಜ್ಞಾನ, ಯಾವ ಕೃಷಿ ವಿಧಾನ ಅನುಸರಿಸಿದರು ಎಂಬುದ್ದನ್ನು ಸಾರ್ವಜನಿಕರಿಗೆ ತಿಳಿಸಬೇಕು ಎಂದು ಹೇಳಿದ್ದಾರೆ.
ನೂರಾರು ಎಕರೆ ಜಮೀನು ಇರುವವರು ಕೃಷಿಯಿಂದ ನಷ್ಟ ಅನುಭವಿಸುತ್ತಿದ್ದಾರೆ. ಅನೇಕರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಅಂಥದ್ದರಲ್ಲಿ 80 ಲಕ್ಷ ರೂಪಾಯಿ ಆದಾಯ ತಂದ ಬಂಗಾರದ ಬೆಳೆ ತೆಗೆದ ಶಾಸಕರು ಕೃಷಿಯಲ್ಲಿ ದೇಶಕ್ಕೆ ಮಾದರಿಯಾಗಿದ್ದಾರೆ. ಭಾರತ ಕೃಷಿ ಪ್ರಧಾನ ದೇಶವಾಗಿದೆ. ಶಾಸಕರು ತಮ್ಮ ಬಂಪರ್ ಲಾಭ ಕೃಷಿ ವಿಧಾನದ ಬಗ್ಗೆ ಕಾರ್ಯಾಗಾರ ಆಯೋಜಿಸಿ, ಮಾಹಿತಿ ನೀಡಿದರೆ ರೈತರಿಗೆ ಉಪಕಾರ ಮಾಡಿದಂತಾಗುತ್ತದೆ. ರೈತರ ಆತ್ಮಹತ್ಯೆ ತಡೆಗಟ್ಟಲು ಹಾಗೂ ರೈತರ ಆರ್ಥಿಕ ಅಭಿವೃದ್ಧಿಗೆ ಅನುಕೂಲವಾಗುತ್ತದೆ ಎಂದು ತಿಳಿಸಿದ್ದಾರೆ.

# ಹೋಟೆಲ್‌ಗಳಿಗೆ ಬಯೋ ಗ್ಯಾಸ್ ಸರಬರಾಜು: ಮಹೇಶ್ವರರಾವ್

**ಬೆಂಗಳೂರು.ಮಾ-14.**-ನಗರದಲ್ಲಿ ಉತ್ಪತ್ತಿಯಾಗುವ ಹಸಿ ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ ಇಂಧನವಾಗಿ ಬಳಸುವ ಉದ್ದೇಶದಿಂದ ಜಿಬಿಎ ವ್ಯಾಪ್ತಿಯಲ್ಲಿ ಇನ್ನಷ್ಟು ಜೈವಿಕ ಅನಿಲ (ಬಯೋಗ್ಯಾಸ್) ಘಟಕಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ.
ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಕೋರಮಂಗಲದಲ್ಲಿರುವ ಕಸ?ರಸ ಘಟಕಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಸಿ ತ್ಯಾಜ್ಯದಿಂದ ಬಯೋಗ್ಯಾಸ್ ಉತ್ಪಾದನೆ ಹೆಚ್ಚಿಸಲು ಸಮಗ್ರ ಅಧ್ಯಯನ ನಡೆಸಿ ಪ್ರತಿ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಹೊಸ ಜೈವಿಕ ಅನಿಲ ಘಟಕಗಳನ್ನು ಸ್ಥಾಪಿಸುವ ಯೋಜನೆ ರೂಪಿಸಲಾಗುತ್ತಿದೆ ಎಂದು ಹೇಳಿದರು.
ವಿಕೇಂದ್ರೀಕೃತ ಕಸದ ಸಂಸ್ಕರಣಾ ಕೇಂದ್ರಗಳನ್ನು ಸ್ಥಾಪಿಸಲು 2 ರಿಂದ 3 ಎಕರೆ ಜಾಗ ಅಗತ್ಯವಿದೆ. ಆದರೆ ಕಡಿಮೆ ಅವಧಿಯಲ್ಲಿ ಈಗಿರುವ ಘಟಕಗಳನ್ನು ಉನ್ನತೀಕರಿಸಿ ಅಲ್ಲಿ ಉತ್ಪಾದನೆಯಾಗುವ ಬಯೋಗ್ಯಾಸ್ ಅನ್ನು ಸ್ಥಳೀಯ ಹೋಟೆಲ್‌ಗಳಿಗೆ ವಿತರಿಸುವ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.
ನಗರದಲ್ಲಿ ಹಸಿ ಹಾಗೂ ಒಣ ತ್ಯಾಜ್ಯವನ್ನು ಮೂಲದಲ್ಲೇ ವಿಂಗಡಿಸಿದರೆ ಕಸದ ಸಂಸ್ಕರಣೆ ಸುಗಮವಾಗಲಿದೆ. ಈ ನಿಟ್ಟಿನಲ್ಲಿ ನಾಗರಿಕರು ಸಹಕಾರ ನೀಡುವುದು ಅತ್ಯಂತ ಮುಖ್ಯ ಎಂದು ಅವರು ಮನವಿ ಮಾಡಿದರು.

ಹೋಟೆಲ್‌ಗಳಿಗೆ ಬಯೋಗ್ಯಾಸ್ ಪೂರೈಕೆ-ಕೋರಮಂಗಲದ ಕಸ?ರಸ ಘಟಕದಲ್ಲಿ ದಿನಕ್ಕೆ ಸುಮಾರು 10 ಟನ್ ಹಸಿ ತ್ಯಾಜ್ಯ ಸಂಸ್ಕರಿಸಿ ಬಯೋಗ್ಯಾಸ್ ಉತ್ಪಾದನೆ ಮಾಡಲಾಗುತ್ತಿದೆ. 8.5 ಟನ್ ಸಾಮರ್ಥ್ಯದ ಘಟಕದಿಂದ ಸಮೀಪದ ಹೋಟೆಲ್‌ಗೆ ದಿನಕ್ಕೆ ಸುಮಾರು 120 ಕೆಜಿ ಬಯೋಗ್ಯಾಸ್ ಪೂರೈಕೆ ಮಾಡಲಾಗುತ್ತಿದ್ದು, ಪ್ರತಿ ಕೆಜಿಗೆ ರೂ.70ರಂತೆ ದಿನಕ್ಕೆ ಸುಮಾರು ರೂ.8,400 ಆದಾಯ ಲಭ್ಯವಾಗುತ್ತಿದೆ.
ಈ ಪ್ರದೇಶದಲ್ಲಿರುವ ಹೈಟೆನ್ಷನ್ ವಿದ್ಯುತ್ ಲೈನ್ ಸ್ಥಳಾಂತರಿಸಿದರೆ ಇನ್ನಷ್ಟು ಪ್ರಮಾಣದಲ್ಲಿ ಬಯೋಗ್ಯಾಸ್ ಉತ್ಪಾದನೆ ಸಾಧ್ಯವಾಗಲಿದೆ ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮಹೇಶ್ವರ್ ರಾವ್ ಹೇಳಿದರು.

ಬಯೋಮೆಥನೈಸೇಷನ್ ಘಟಕಗಳ ವಿಸ್ತರಣೆ-ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕರೀಗೌಡ ಮಾತನಾಡಿ, ಬಿಬಿಎಂಪಿ ನಿರ್ಮಿಸಿದ್ದ 12 ಬಯೋಗ್ಯಾಸ್ ಘಟಕಗಳಲ್ಲಿ ಪ್ರಸ್ತುತ 6 ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಪ್ರತಿಘಟಕದಲ್ಲಿ ದಿನಕ್ಕೆ 5 ಟನ್ ಹಸಿ ತ್ಯಾಜ್ಯ ಸಂಸ್ಕರಿಸಿ ಒಟ್ಟಾರೆ ಸುಮಾರು 30 ಟನ್ ತ್ಯಾಜ್ಯದಿಂದ ಬಯೋಗ್ಯಾಸ್ ಉತ್ಪಾದನೆ ನಡೆಯುತ್ತಿದೆ ಎಂದು ತಿಳಿಸಿದರು.ಉಳಿದ 6 ಘಟಕಗಳನ್ನು ನವೀಕರಣಗೊಳಿಸುವ ಕಾಮಗಾರಿ ನಡೆಯುತ್ತಿದ್ದು, ಪ್ರತಿ ಟನ್ ಹಸಿ ತ್ಯಾಜ್ಯದಿಂದ 30 ರಿಂದ 50 ಕೆಜಿ ಬಯೋಗ್ಯಾಸ್ ಉತ್ಪಾದನೆ ಸಾಧ್ಯವಾಗುತ್ತದೆ ಎಂದರು.



ಹೊಸ ಘಟಕಗಳಿಗೆ ಚಾಲನೆ-ನಗರದಲ್ಲಿ ಹೊಸದಾಗಿ ನಾಲ್ಕು ವಿಕೇಂದ್ರೀಕೃತ ಬಯೋಮೆಥನೈಸೇಷನ್ ಘಟಕಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ. ವಾರ್ಡ್ 151 ಹಾಗೂ 27ರಲ್ಲಿ ನಿರ್ಮಾಣಗೊಂಡ ಎರಡನೆಯ ಘಟಕಗಳು ಶೀಘ್ರದಲ್ಲೇ ಕಾರ್ಯಾರಂಭಗೊಳ್ಳಲಿವೆ. ವಾರ್ಡ್ 196 ಮತ್ತು 56ರಲ್ಲಿ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ.
ಇದಲ್ಲದೆ ಗೇಲ್ ಗ್ಯಾಸ್ ಇಂಡಿಯಾ ಕಂಪನಿಯ ಸಹಯೋಗದಲ್ಲಿ ದಿನಕ್ಕೆ ಸುಮಾರು 300 ಟನ್ ಹಸಿ ತ್ಯಾಜ್ಯ ಸಂಸ್ಕರಿಸುವ ಸಾಮರ್ಥ್ಯದ ಬೃಹತ್ ಬಯೋಗ್ಯಾಸ್ ಘಟಕ ನಿರ್ಮಾಣಕ್ಕೂ ಚಾಲನೆ ನೀಡಲಾಗಿದೆ. ಕನ್ನಹಳ್ಳಿ ಪ್ರದೇಶದಲ್ಲಿ 1000 ಟನ್ ಹಸಿ ತ್ಯಾಜ್ಯ ಸಂಸ್ಕರಿಸುವ ಮತ್ತೊಂದು ಘಟಕ ಸ್ಥಾಪನೆಗೆ ಮೆ. ಸಾತರಾಂ ಸಂಸ್ಥೆಯೊಂದಿಗೆ ಒಪ್ಪಂದಕ್ಕೂ ಅನುಮೋದನೆ ನೀಡಲಾಗಿದೆ.

ಬಯೋ-ಅಓಲು ರೂಪದಲ್ಲಿ ಮಾರಾಟ-ಹೇರೋಹಳ್ಳಿ ಪ್ರದೇಶದಲ್ಲಿರುವ ಘಟಕದಲ್ಲಿ ದಿನಕ್ಕೆ 50 ಟನ್ ತ್ಯಾಜ್ಯ ಸಂಸ್ಕರಣೆ ಮಾಡಲಾಗುತ್ತಿದ್ದು, ಸುಮಾರು 1500 ಕೆಜಿ ಗ್ಯಾಸ್ ಉತ್ಪಾದನೆಯಾಗುತ್ತಿದೆ. ಈ ಗ್ಯಾಸ್ ಅನ್ನು ಬಯೋ-ಅಓಲು ರೂಪದಲ್ಲಿ ಮಾರಾಟ ಮಾಡಲಾಗುತ್ತಿದ್ದು, ಭವಿಷ್ಯದಲ್ಲಿ ಪೈಪ್‌ಲೈನ್ ಮೂಲಕ ಮನೆಮನೆಗೆ ತಲುಪಿಸುವ ಯೋಜನೆಯೂ ರೂಪಿಸಲಾಗುತ್ತಿದೆ.

ನಗರದಲ್ಲಿ ಉತ್ಪತ್ತಿಯಾಗುವ ಸುಮಾರು 3000 ಟನ್ ಹಸಿ ತ್ಯಾಜ್ಯದಿಂದ ಬಯೋಗ್ಯಾಸ್ ಉತ್ಪಾದಿಸುವ ಯೋಜನೆಯನ್ನು ಸಮಗ್ರ ಘನತ್ಯಾಜ್ಯ ನಿರ್ವಹಣಾ ಯೋಜನೆಯಲ್ಲಿ ಒಳಗೊಂಡಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಮನೆಮಟ್ಟದಲ್ಲಿಯೂ ಘಟಕ ಸಾಧ್ಯ-ಮನೆಮಟ್ಟದಲ್ಲಿಯೂ ಸಣ್ಣ ಬಯೋಗ್ಯಾಸ್ ಘಟಕಗಳನ್ನು ಅಳವಡಿಸಬಹುದಾಗಿದ್ದು, ಸುಮಾರು ರೂ.20,000 ವೆಚ್ಚದಲ್ಲಿ ಮನೆಯಲ್ಲೇ ಉತ್ಪತ್ತಿಯಾಗುವ ಹಸಿ ತ್ಯಾಜ್ಯದಿಂದ ಗ್ಯಾಸ್ ಉತ್ಪಾದಿಸಿ ಅಡುಗೆ ಇಂಧನವಾಗಿ ಬಳಸಬಹುದು ಎಂದು ಅಧಿಕಾರಿಗಳು ತಿಳಿಸಿದರು.ಈ ವೇಳೆ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಆಯುಕ್ತ ರಮೇಶ್ ಕೆ.ಎನ್., ಮುಖ್ಯ ಅಭಿಯಂತರ ಬಸವರಾಜ್ ಕಬಾಡೆ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# ಕುಡಿಯುವ ನೀರಿನ ತೊಂದರೆಯಾಗದಂತೆ ಕ್ರಮ ವಹಿಸಿ:ಡಾ. ಆನಂದ ಕೆ.

**ವಿಜಯಪುರ,ಮಾ.14–** ಜಿಲ್ಲೆಯಲ್ಲಿ ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ತೊಂದರೆಯಾಗಂತೆ ಈಗಿನಿಂದಲೇ ಮುಂಜಾಗೃತ ಕ್ರಮಕ್ಕಾಗಿ ಯೋಜನೆ ರೂಪಿಸಿ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ತಿಳಿಸಿದರು.



ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಹಾಗೂ ಕುಡಿಯುವ ನೀರಿನ ನಿರ್ವಹಣೆ ಕುರಿತು ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ದುರಸ್ತಿ ಇರುವ ಬೋರವೆಲ್‌ಗಳನ್ನು ಪುನಶ್ಚೇತನಗೊಳಿಸಿ ನೀರಿನ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಜಿಲ್ಲೆಯಲ್ಲಿರುವ ದುರಸ್ತಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ತಿಗೊಳಿಸಿ ಕುಡಿಯುವ ನೀರು ಸಮರ್ಪಕವಾಗಿ ದೊರೆಯುವಂತೆ ನೋಡಿಕೊಳ್ಳಬೇಕು. ಕುಡಿಯುವ ನೀರಿನ ಶುದ್ಧತೆ ಕುರಿತು ಮೇಲಿಂದ ಮೇಲೆ ಪರೀಕ್ಷಿಸಿ ಶುದ್ಧ ನೀರು ದೊರಕುವಂತ ಕ್ರಮ ವಹಿಸಬೇಕು. ಪ್ರಸಕ್ತ ವರ್ಷ ಏಪ್ರೀಲ್ 3ರ ನಂತರ ಜಿಲ್ಲೆಯಲ್ಲಿರುವ ಕುಡಿಯುವ ನೀರಿಗಾಗಿ ಕಾಲುವೆಗಳ ಮೂಲಕ ಕೆರೆಗಳಿಗೆ ನೀರನ್ನು ಹರಿ ಬಿಡಲಾಗುತ್ತಿದ್ದು, ಕುಡಿಯುವ ನೀರಿಗಾಗಿ ಬಳಸಲು ಮಾತ್ರ ಉಪಯೋಗಿಸುವಂತೆಯೂ ಹಾಗೂ ಯಾವುದೇ ಕಾರಣಕ್ಕೂ ಇತರ ಕಾರಣಕ್ಕೆ ಬಳಸದಂತೆ ಮುನ್ನೆಚ್ಚರಿಕೆ ವಹಿಸಬೇಕು. ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರಿಗಾಗಿ ಸಮಸ್ಯೆಯಾಗದಂತೆ ಕಾಲುವೆಗಳ ಮೇಲೆ ಪಂಪ್ ಸೆಟ್ ಇರದಂತೆ ನೋಡಿಕೊಳ್ಳಬೇಕು. ಹಗಲು ಮತ್ತು ರಾತ್ರಿ ವೇಳೆಯಲ್ಲಿ ನಿಗಾ ವಹಿಸುವಂತೆ ಅಗತ್ಯ ಸಿಬ್ಬಂದಿ ನೇಮಿಸಬೇಕು.ಅದರೊಂದಿಗೆ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿ ಸಹಕರಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿರುವ ವಸತಿ ನಿಲಯ, ಅಂಗನವಾಡಿ, ಶಾಲಾ ಕಾಲೇಜುಗಳಲ್ಲಿ ನೀರಿನ ಅಭಾವವಾಗದಂತೆ ಈಗಿಂದಲೇ ಯೋಜನೆ ರೂಪಿಸಿ ಸಮರ್ಪಕವಾಗಿ ಶುದ್ಧ ಕುಡಿಯುವ ನೀರು ಸರಬರಾಜುವಿಗೆ ಕ್ರಮ ವಹಿಸಬೇಕು. ಕುಡಿಯುವ ನೀರಿನ ತೊಂದರೆಯಾಗದಂತೆ ಜಿಲ್ಲೆಯ ಎಲ್ಲ ತಾಲೂಕು ತಹಶೀಲ್ದಾರರು ಸಭೆ ಕರೆದು ಕ್ರಮ ವಹಿಸಬೇಕು. ಕುಡಿಯುವ ನೀರು ಸಂಗ್ರಹ ಘಟಕಗಳನ್ನು ಪ್ರತಿ 15 ದಿನಗಳಿಗೊಮ್ಮೆ ಸ್ವಚ್ಚಗೊಳಿಸಿ, ಶುದ್ಧ ಕುಡಿಯುವ ನೀರು ಸರಬರಾಜಾಗುವಂತೆ ನೋಡಿಕೊಳ್ಳಬೇಕು ಎಂದು ಕಟ್ಟುನಿಟ್ಟಾಗಿ ಸೂಚಿಸಿದರು.

ಏಪ್ರೀಲ್‌ನಿಂದ ಬಿಸಿಲಿನ ಪ್ರಖರತೆ ಹೆಚ್ಚಾಗುವ ಹಿನ್ನೆಲೆಯಲ್ಲಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ಸಾರ್ವಜನಿಕರ ಆರೋಗ್ಯದ ಹಿತ ದೃಷ್ಟಿಯಿಂದ ಸಾರ್ವಜನಿಕರಿಗೆ ಅಗತ್ಯ ತಿಳಿವಳಿಕೆ ಮೂಡಿಸಬೇಕು. ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಜನನಿಬಿಡ ಪ್ರದೇಶಗಳಲ್ಲಿ ಕರ ಪತ್ರ ವಿತರಣೆ, ಪ್ರಚಾರ ಫಲಕ, ಧ್ವನಿವರ್ಧಕಗಳನ್ನು ಬಳಸಿ, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು.ಈ ಕುರಿತು ಈಗಾಗಲೇ ಯೋಜನೆ ರೂಪಿಸಿ ಕಾರ್ಯರೂಪಕ್ಕೆ ತರಬೇಕು. ಮಳೆಗಾಲದ ಸಮಯದಲ್ಲಿ ಸಾರ್ವಜನಿಕರು ಗುಡುಗು ಮತ್ತು ಸಿಡಿಲುಗಳಿಂದ ಸುರಕ್ಷಿತವಾಗಿ ರಕ್ಷಿಸಿಕೊಳ್ಳಲು ಹಾಗೂ ಪ್ರಾಣಾಪಾಯದಿಂದ ಪಾರಾಗಲು ಮಾರ್ಗ ಸೂಚಿಗಳ ಜಾಗೃತಿ ಮೂಡಿಸುವಂತೆ ಸಭೆಯಲ್ಲಿ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳಾದ ರಿಷಿ ಆನಂದ ಮಾತನಾಡಿ ಜಿಲ್ಲೆಯ ಎಲ್ಲ ಪಟ್ಟಣ ಪಂಚಾಯತಿ ಗ್ರಾ,ಮ ಪಂಚಾಯತಿಗಳಲ್ಲಿ ಕುಡಿಯುವ ನೀರು ಹಾಗೂ ಬಿಸಿಲಿನ ಪ್ರಖರತೆಯಿಂದ ಸಾರ್ವಜನಿಕರ ಸುರಕ್ಷತೆಗಾಗಿ ಜಾಗೃತಿ ಕಾರ್ಯಕ್ರಮಗಳು ಮತ್ತು ಸಭೆಗಳನ್ನು ನಡೆಸಲಾಗಿದ್ದು,ಬೇಸಿಗೆ ಸಮಯದಲ್ಲಿ ನೀರಿನ ತೊಂದರೆಯಾಗದಂತೆ ಕ್ರಮ ವಹಿಸಲಾಗುತ್ತಿದೆ ಎಂದು ಅವರು ಹೇಳಿದರು.

ಸಭೆಯಲ್ಲಿ ಅಪರ ಜಿಲಾಧಿಕಾರಿ ಡಾ.ಔದ್ರಾಮ, ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳಾದ ಪ್ರಕಾಶ ವಡ್ಡರ, ತಾಲೂಕಿನ ಎಲ್ಲ ತಹಶೀಲ್ದಾರರು, ಜಿಲ್ಲಾ ಮಟ್ಟದ ಅಧಿಕಾರಿಗಳ ಹಾಗೂ ಇತರರು ಉಪಸ್ಥಿತರಿದ್ದರು.2

# ದುಡಿಯುವ ಮಹಿಳೆಯರ ಸಮನ್ವಯ ಸಮಿತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ



**ಬಳ್ಳಾರಿ, ಮಾ.14:** ಗಣತಂತ್ರ ಉಳಿಸಿ, ಸಾರ್ವಭೌಮತೆಯನ್ನು ರಕ್ಷಿಸಿ, ಸಮಾಜಕ್ಕಾಗಿ ಹೋರಾಡಿ ಲಿಂಗ ತಾರತಮ್ಯ ವಿರೋಧಿಸಿ, ಜೀವನೋಪಾಯದ ಮೇಲಿನ ದಾಳಿಯನ್ನು ವಿರೋಧಿಸಿ 118 ನೇ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಬಳ್ಳಾರಿಯ ಗಾಂಧಿ ಭವನದಲ್ಲಿ ಸಿಐಟಿಯು ಮತ್ತು ಜೆಎಸ್‌ಸ್ ಸಂಘಟನೆಯಿಂದ ಬಳ್ಳಾರಿಯ ಗಾಂಧಿ ಭವನದಲ್ಲಿ ಆಚರಿಸಲಾಯಿತು. ಈ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಬಾಲಕಿಯರ ಬಾಲ ಮಂದಿರದ ಅಧೀಕ್ಷಕರಾದ ನಾಗವೇಣಿ ಅವರು ಆಗಮಿಸಿ ಉದ್ಘಾಟನೆ

ಭಾಷಣವನ್ನು ಮಾಡಿದರು.ಪ್ರತಿನಿತ್ಯ ಹೆಣ್ಣನ್ನು ಕನಿಷ್ಠ ಗೊಳಿಸುವ ಹೆಣ್ಣಿನ ಘನತೆಗೆ ಧಕ್ಕೆ ತರುವ ಹೆಣ್ಣು ಮಕ್ಕಳ ಸಾಗಾಣಿಕೆ ,ಆಯ್ಕೆಯ ಮೇಲೆ ದಾಳಿ ಮರ್ಯಾದೆಗೇಡು ಹತ್ಯೆಗಳು, ಅತ್ಯಾಚಾರಗಳು , ಹೆಣ್ಣು ಭ್ರೂಣಹತ್ಯೆ , ಬಾಲ್ಯ ವಿವಾಹ ಹಾಗೂ ಲಿಂಗ ತಾರತಮ್ಯ ಕೊನೆಗಾಣಿಸಬೇಕು ಎಂದು ಹೇಳಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಉದ್ಘಾಟನಾ ಭಾಷಣವನ್ನು ಮಾಡಿದರು. ನಂತರ ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆಯ ರಾಜ್ಯಾಧ್ಯಕ್ಷರಾದ ಸಂಗಾತಿ ಚಂದ್ರಕುಮಾರಿ ಅವರು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಶುಭ ಕೋರಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ದಿನದಂದು ಮೂಲ ಚರಿತ್ರೆಯನ್ನು ರಕ್ಷಿಸುವ ಪಣತೊಡುತ್ತಾ ಶೋಷಣೆ ಮತ್ತು ದಬ್ಬಾಳಿಕೆ ವಿರುದ್ಧ ನಿರಂತರ ಹೋರಾಟಗಳನ್ನು ನೆನೆಯುವ ದಿನವಾಗಿ ಮಹಿಳೆಯರ ಮೇಲಿನ ದಬ್ಬಾಳಿಕೆ ನಿಜ ಕಾರಣಗಳನ್ನು ಕೊನೆಗೊಳಿಸುವ ನಿಟ್ಟಿನಲ್ಲಿ ಹಾಗೂ ಪರ್ಯಾಯಗಳ ಇರುವಿಕೆಯನ್ನು ಮತ್ತದನ್ನು ಗಳಿಸಲು ಹೋಗುವ ಹೋರಾಟ ಮಾಡೋಣ ಎಂದು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ದುಡಿಯುವ ಮಹಿಳೆಯರ ಸಮನ್ವಯ ಸಮಿತಿಯ ಜಿಲ್ಲಾ ಸಂಚಾಲಕರಾದ ಉಮಾದೇವಿ, ಸಿಐಟಿಯುನ ರಾಜ್ಯ ಉಪಾಧ್ಯಕ್ಷರಾದ ಜೆ ಸತ್ಯ ಬಾಬು, ಸಿಐಟಿಯು ಜಿಲ್ಲಾ ಕಾರ್ಯದರ್ಶಿಗಳಾದ ಮಲ್ಲಮ್ಮ, ಅಕ್ಷರ ದಾಸೋಹ ನೌಕರರ ಸಂಘಟನೆಯ ಜಿಲ್ಲಾ ಕಾರ್ಯದರ್ಶಿಗಳಾದ ದುರುಗಮ್ಮ, ಜನವಾದಿ ಮಹಿಳಾ ಸಂಘಟನೆಯ ಜಿಲ್ಲಾ ಕಾರ್ಯದರ್ಶಿಗಳಾದ ಸಂಗಾತಿ ವರಲಕ್ಷ್ಮಿ, ಅಂಗನವಾಡಿ ನೌಕರ ಸಂಘಟನೆಯ ತಾಲೂಕ ಅಧ್ಯಕ್ಷರಾದ ಕಾಂ. ಕಿರಣ್ ಕುಮಾರಿ, ಕಾರ್ಯದರ್ಶಿಗಳಾದ ಈರಮ್ಮ, ನಗರ ಕಾರ್ಯದರ್ಶಿಗಳಾದ ರಾಣಿ ಎಲಿಜಬೆತ್ ಹಾಗೂ ಸಿಐಟಿಯು ಸಾಮೂಹಿಕ ಸಂಘಟನೆಯ ಎಲ್ಲಾ ಪದಾಧಿಕಾರಿಗಳು ಮತ್ತು ಸದಸ್ಯರು ಭಾಗವಹಿಸಿದ್ದರು.

## ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ–2031 ವರದಿಗಳ ತಯಾರಿಕೆಗೆ ನಿಖರ ಹಾಗೂ ಸಮಗ್ರ ಮಾಹಿತಿ ಒದಗಿಸಿ ಜಿ.ಪಂ. ಸಿಇಓ ರಿಷಿ ಆನಂದ

**ವಿಜಯಪುರ,ಮಾ.14–** ಜಿಲ್ಲಾ ಮಾನವ ಅಭಿವೃದ್ಧಿ ವರದಿ–2025 ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ–2031 ವರದಿ ತಯಾರಿಕೆಗೆ ನಿಖರವಾದ ಮತ್ತು ಸ್ಪಷ್ಟವಾದ ದತ್ತಾಂಶಗಳಿಂದ ಕೂಡಿದ ನಿಗಧಿತ ನಮೂನೆಯಲ್ಲಿ ದೃಢೀಕರಿಸಿ,ವಿಳಂಬ ಮಾಡದೇ ನಿಗದಿತ ಕಾಲಾವಧಿಯೊಳಗೆ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾದ ರಿಷಿ ಆನಂದ ಅವರು ಸೂಚಿಸಿದರು.



ಮಾರ್ಚ್ 13 ರಂದು ಜಿಲ್ಲಾ ಪಂಚಾಯತಿಯ ಸಭಂಗಣದಲ್ಲಿ ನಡೆದ ಜಿಲ್ಲಾ ಮಾನವ ಅಭಿವೃದ್ಧಿ ವರದಿ–2025 ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ–2031 ವರದಿ ತಯಾರಿಸುವ ಕುರಿತು ವಲಯವಾರು ಉಪ ಸಮಿತಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಮಾನವ ಅಭಿವೃದ್ಧಿ ವರದಿ–2025ಕ್ಕೆ ಸಂಬಂಧಸಿದಂತೆ 126 ಸೂಚ್ಯಾಂಕಗಳ ಪೈಕಿ 47 ಸೂಚ್ಯಾಂಕಗಳ ಮಾಹಿತಿಯನ್ನು ಸಲ್ಲಿಸಿದ್ದು, ಬಾಕಿ 79 ಸೂಚ್ಯಾಂಕಗಳ ಮಾಹಿತಿಯನ್ನು ಸಲ್ಲಿಸಲು ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ–2031ಕ್ಕೆ ಸಂಬಂಧಸಿದಂತೆ 176 ಸೂಚ್ಯಾಂಕಗಳ ಪೈಕಿ 69 ಸೂಚ್ಯಾಂಕಗಳ ಮಾಹಿತಿಯನ್ನು ಸಲ್ಲಿಸಿದ್ದು, ಬಾಕಿ 107 ಸೂಚ್ಯಾಂಕಗಳ ಮಾಹಿತಿಯನ್ನು ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳು ನಿಖರವಾದ ಮತ್ತು ಸ್ಪಷ್ಟವಾದ ದತ್ತಾಂಶಗಳುಳ್ಳ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿಗಳಾದ ಸಿ. ಬಿ. ಕುಂಬಾರ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾ ಅಧಿಕಾರಿಗಳಾದ ನಾಗಭೂಷಣ ಮಾಡಗಿ, ತಾಂತ್ರಿಕ ಬೆಂಬಲ ಸಂಸ್ಥೆಯಾದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವ ವಿದ್ಯಾಲಯದ ಸಂಯೋಜಕರಾದ ಪ್ರೋ. ಡಿ. ಎಮ್. ಮದರಿ, ಜಿಲ್ಲಾ ಪಂಚಾಯಿತಿ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿ ಇದ್ದರು.

# 22ರಂದು ಬೀದರಿನಲ್ಲಿ ಸಚಿವ ಈಶ್ವರ ಖಂಡ್ರೆ ಅವರ ಅಭಿನಂದನಾ ಸಮಾರಂಭ: ಜಾಬಶೆಟ್ಟಿ



**ಬೀದರ್:ಮಾ.14:** ಕರ್ನಾಟಕ ಸರ್ಕಾರದ ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಸಚಿವರಾದ ಈಶ್ವರ ಬಿ. ಖಂಡ್ರೆ ಅವರು ಅತ್ಯಂತ ಕಿರಿಯ ವಯಸ್ಸಿನಲ್ಲಿ ಅಖಿಲ ಭಾರತೀಯ ವೀರಶೈವ ಲಿಂಗಾಯತ ಮಹಾಸಭಾದ 24ನೇ ರಾಷ್ಟ್ರೀಯ ಅಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆ ಆಗಿರುವ ಪ್ರಯುಕ್ತ ಅವರಿಗೆ ಅಭಿನಂದನೆ ಸಲ್ಲಿಸುವ ಸಮಾರಂಭವನ್ನು ಮಾರ್ಚ್ 22 ರಂದು ಭಾನುವಾರ ಸಂಜೆ 6 ಗಂಟೆಗೆ ಬೀದರ ನಗರದ ಗುಂಪ ರಸ್ತೆಯಲ್ಲಿರುವ ಕರ್ನಾಟಕ ಫಾರ್ಮಸಿ ಕಾಲೇಜು ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ಈಶ್ವರ ಖಂಡ್ರೆ ಅವರ ಅಭಿನಂದನಾ ಸಮಾರಂಭದ ಸ್ವಾಗತ ಸಮಿತಿಯ ಅಧ್ಯಕ್ಷರು ಹಾಗೂ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಅಂದು ಸಂಜೆ 4 ಗಂಟೆಗೆ ನಗರದ ಬಸವೇಶ್ವರ ವೃತ್ತದಿಂದ ಭವ್ಯ ಮೆರವಣಿಗೆ ಆರಂಭವಾಗಿ ಬೊಮ್ಮಗೊಂಡೇಶ್ವರ ವೃತ್ತ ಮಾರ್ಗವಾಗಿ ಕಾರ್ಯಕ್ರಮ ಸ್ಥಳಕ್ಕೆ ತಲುಪಲಿದೆ. ಮೆರವಣಿಗೆಯುದ್ದಕ್ಕೂ ಅನೇಕ ಕಲಾ ತಂಡಗಳು ಭಾಗವಹಿಸಿ ಮೆರವಣಿಗೆ ಶೋಭೆ ಹೆಚ್ಚಿಸಲಿವೆ ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಅನುಭವ ಮಂಟಪದ ಅಧ್ಯಕ್ಷರು ಆದ ನಾಡೋಜ ಪೂಜ್ಯ ಡಾ. ಬಸವಲಿಂಗ ಪಟ್ಟದೇವರು, ಚಿದಂಬರ ಆಶ್ರಮದ ಪೂಜ್ಯ ಡಾ ಶಿವಕುಮಾರ ಮಹಾಸ್ವಾಮಿಗಳು, ಹಾರಕುಡದ ಪೂಜ್ಯ ಡಾ ಚನ್ನವೀರ ಶಿವಾಚಾರ್ಯರು, ಪೂಜ್ಯ ನಿಜಗುಣಾನಂದ ಪ್ರಭು ತೋಂಟದಾರ್ಯ ಮಹಾಸ್ವಾಮಿಗಳು, ಪೂಜ್ಯ ಶಿವಾನಂದ ಮಹಾಸ್ವಾಮಿಗಳು, ಪೂಜ್ಯ ಶಿವಯೋಗೇಶ್ವರ ಮಹಾಸ್ವಾಮಿಗಳು, ಪೂಜ್ಯ ರಾಜೇಶ್ವರ ಶಿವಾಚಾರ್ಯರು, ಡಾ. ಸಿದ್ದರಾಮ ಶರಣರು ಬೆಲ್ದಾಳ, ಪೂಜ್ಯ ಡಾ ಗಂಗಾಂಬಿಕೆ ಅಕ್ಕ ಹಾಗೂ ಇತರೆ 70ಕ್ಕೂ ಹೆಚ್ಚಿನ ಪೂಜ್ಯರು ಕಾರ್ಯಕ್ರಮದ ಸಾನಿಧ್ಯ ವಹಿಸುವರು. ತಾನು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅಭಿನಂದನಾ ನುಡಿ ನುಡಿಯುವುದಾಗಿ ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ರಾಜಶೇಖರ ಬಿ ಪಾಟೀಲ್, ಸಂಸದ ಸಾಗರ ಖಂಡ್ರೆ, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಹುಮನಾಬಾದ್ ಶಾಸಕ ಡಾ ಸಿದ್ದಲಿಂಗಪ್ಪ ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಚಂದ್ರಶೇಖರ ಬಿ ಪಾಟೀಲ್, ಶಶಿಲ್ ಜಿ ನಮೋಶಿ, ಭೀಮರಾವ ಬಿ ಪಾಟೀಲ್, ಮಾಜಿ ಶಾಸಕ ಪ್ರಕಾಶ ಖಂಡ್ರೆ, ಅಶೋಕ ಖೇಣಿ, ಸುಭಾಷ ಕಲ್ಲೂರ, ಮಲ್ಲಿಕಾರ್ಜುನ ಖೂಬಾ, ಗುಂಡಪ್ಪ ಬಿರಾದಾರ, ಎನ್ ಎಸ್ ಎಸ್ ಕೆ ಅಧ್ಯಕ್ಷ ಸುರ್ಯಕಾಂತ ನಾಗಮಾರಪಳ್ಳಿ, ಮಾಜಿ ಅಧ್ಯಕ್ಷ ಡಿ.ಕೆ ಸಿದ್ರಾಮ, ಗಾಂಧಿಗಂಜ್ ಸಹಕಾರ ಬ್ಯಾಂಕ್ ಅಧ್ಯಕ್ಷ ವಿಜಯಕುಮಾರ ಪಾಟೀಲ್ ಗಾದಗಿ, ಮಹಾನಗರ ಪಾಲಿಕೆ ಉಪ ಮಹಾಪೌರರಾದ ಲಕ್ಷ್ಮೀಬಾಯಿ ಹಂಗರಗಿ ಸೇರಿದಂತೆ ಅನೇಕ ಮುಖಂಡರು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ವಿವರಿಸಿ, ಕಾರ್ಯಕ್ರಮ ಯಶಸ್ವಿಗೆ ಅನೇಕ ಸಮಿತಿಗಳು ರಚಿಸಲಾಗಿದ್ದು ಸಮಿತಿಯಲ್ಲಿ ಕಾರ್ಯನಿರ್ವಹಿಸುವವರ ಯಾದಿ ಓದಿ, ಇದೊಂದು ಹಬ್ಬದ ರೂಪದಲ್ಲಿ ಅದ್ದೂರಿಯಾಗಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದೆಂದು ಜಾಬಶೆಟ್ಟಿ ಹೇಳಿದರು.

ಕಾರ್ಯಕ್ರಮದ ಸ್ವಾಗತ ಸಮಿತಿಯ ಕಾರ್ಯಾಧ್ಯಕ್ಷ ಬಾಬು ವಾಲಿ ಸಂದರ್ಭದಲ್ಲಿ ಮಾತನಾಡಿ, ವೀರಶೈವ ಲಿಂಗಾಯತ ಒಳ ಪಂಗಡದವರಾದ ನಾವೆಲ್ಲ ಸೇರಿ ಈ ಕಾರ್ಯಕ್ರಮ ಮಾಡಿದರೂ ಸಹ ಈಶ್ವರ ಖಂಡ್ರೆ ಅಭಿಮಾನಿಗಳು ಎಲ್ಲ ಸಮಾಜದಲ್ಲಿ ಅಧಿಕ ಸಂಖ್ಯೆಯಲ್ಲಿದ್ದು, ಎಲ್ಲ ಸಮುದಾಯದ ಬಾಂಧವರು ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು.

ಸಮಿತಿಯ ಇನ್ನೋರ್ವ ಕಾರ್ಯಾಧ್ಯಕ್ಷ ಸೋಮಶೇಖರ ಪಾಟೀಲ್ ಗಾದಗಿ ಮಾತನಾಡಿ ಇದೊಂದು ಐತಿಹಾಸಿಕ ಕಾರ್ಯಕ್ರಮವಾಗಿದ್ದು, ಎಲ್ಲ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕರೆ ಕೊಟ್ಟರು,

ಪ್ರಧಾನ ಕಾರ್ಯದರ್ಶಿ ಡಾ ರಜನೀಶ ವಾಲಿ, ಕೋಶಾಧ್ಯಕ್ಷ ಜಯರಾಜ ಖಂಡ್ರೆ, ಸಂಯೋಜಕರಾದ ಪ್ರೋ ಜಗನ್ನಾಥ ಹೆಬ್ಬಾಳೆ, ಸಮಿತಿಯ ಇತರೆ ಪದಾಧಿಕಾರಿಗಳಾದ ಬಿ.ಜಿ ಶಟಕಾರ, ವೈಜಿನಾಥ ಕಮಠಾಣೆ, ಶ್ರೀಕಾಂತ ಸ್ವಾಮಿ, ಸುರೇಶ ಚನಶೆಟ್ಟಿ, ದೀಪಕ ವಾಲಿ, ಅನಂದ ದೇವಪ್ಪ, ಶರಣಪ್ಪ ಮಿಠಾರೆ, ಶಿವಯ್ಯ ಸ್ವಾಮಿ, ಧನರಾಜ ಹಂಗರಗಿ, ಬಸವರಾಜ ಪಾಟೀಲ ಹಾರೂರಗೇರಿ, ಸಹಜಾನಂದ ಕಂದಗುಳೆ, ಪ್ರೋ. ಉಮಾಕಾಂತ ಪಾಟೀಲ, ಚಂದ್ರಶೇಖರ ಹೆಬ್ಬಾಳೆ, ಸಂತೋಷ ಪಾಟೀಲ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

# ಜಿಲ್ಲಾ ಮಟ್ಟದ ಹೆಚ್.ಪಿ.ವಿ. ಲಸಿಕೆ ನೀಡುವ ಅಭಿಯಾನಕ್ಕೆ ಚಾಲನೆ



**ಕಲಬುರಗಿ,ಮಾ.14–**ಕಲಬುರಗಿ ನಗರ ಆರೋಗ್ಯ ಕೇಂದ್ರ ICDS ದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾದ ಜಿಲ್ಲಾ ಮಟ್ಟದ ಹೆಚ್.ಪಿ.ವಿ. (HPV) ಲಸಿಕೆ ನೀಡುವ ಅಭಿಯಾನಕ್ಕೆ ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ॥ ಶರಣಬಸಪ್ಪ ಕ್ಯಾತನಾಳ ಅವರು ಚಾಲನೆ ನೀಡಿದರು.

ನಂತರ ಅವರು ಮಾತನಾಡಿ, 14 ರಿಂದ 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಗರ್ಭಕಂಠದ ಕ್ಯಾನ್ಸರ ನಿರೋಧಕ ಲಸಿಕೆಯಾದ ಹೆಚ್.ಪಿ.ವಿ. (HPV) ಲಸಿಕೆಯನ್ನು ಕಲಬುರಗಿ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಆಸ್ಪತ್ರೆ (ಜಿಮ್ಸ್) ಕಲಬುರಗಿ ಹಾಗೂ ಜಿಲ್ಲೆಯ ಎಲ್ಲಾ ತಾಲೂಕಾ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಪ್ರತಿ ದಿವಸ ಮತ್ತು ಪ್ರತಿ ಬುಧವಾರ ಮತ್ತು ಶುಕ್ರವಾರ ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ನಗರ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ನೀಡಲಾಗುತ್ತದೆ.

ಭಾರತೀಯ ಮಹಿಳೆಯರಲ್ಲಿ ಕಂಡು ಬರುವ ಕ್ಯಾನ್ಸರಗಳಲ್ಲಿ ಗರ್ಭಕಂಠದ ಕ್ಯಾನ್ಸರ್ 2ನೇ ಸ್ಥಾನದಲ್ಲಿದೆ. ಇದನ್ನು ತಡೆಗಟ್ಟಲು ಭಾರತ ಸರ್ಕಾರ ಹಾಗೂ ನಮ್ಮ ಕರ್ನಾಟಕ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿರುವ ಪ್ರಯುಕ್ತ ಎಲ್ಲಾ 14 ರಿಂದ 15 ವರ್ಷದೊಳಗಿನ ಹೆಣ್ಣು ಮಕ್ಕಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ॥ ಸಿದ್ರಾಮಪ್ಪ ಪಾಟೀಲ್ ಅವರು ಮಾತನಾಡಿ, ಹೆಚ್.ಪಿ.ವಿ. (HPV) ಎಂದರೆ 'ಹ್ಯೂಮನ್ ಪ್ಯಾಪಿಲೋಮ್ ವೈರಸ್'. ಇದು ಜನನಾಂಗದ ಸೋಂಕುಗಳಿಗೆ ಕಾರಣವಾಗುವ ಒಂದು ಸಾಮಾನ್ಯ ವೈರಸ್. ಮಹಿಳೆಯರಲ್ಲಿ ಕಂಡು ಬರುವ ಗರ್ಭಕಂಠದ ಕ್ಯಾನ್ಸರ್ ಹೆಚ್ಚಾಗಿ ಇದೇ ವೈರಸ್ ಕಾರಣವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಿ.ಸಿ.ಟಿ. (CCT) ಕಾರ್ಯಕ್ರಮ ನಿಯಂತ್ರಣಾ ಅಧಿಕಾರಿ ಡಾ॥ ವಿವೇಕಾನಂದ ರೆಡ್ಡಿ, UGC ಕೌನ್ಸಿಲ್ ಸದಸ್ಯ ಡಾ॥ ಸುಧಾ ಹಾಲಕಾಯಿ, ತಾಲೂಕಾ ಆರೋಗ್ಯ ಅಧಿಕಾರಿ ಡಾ॥ ಮಾರುತಿ ಕಾಂಬಳೆ ಕಲಬುರಗಿ ದಕ್ಷಿಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿಜಯಕುಮಾರ ಜಮಖಂಡಿ, ಕಲಬುರಗಿ (ಐಸಿಡಿಎಸ್) ICDS ನಗರ ಆರೋಗ್ಯ ಕೇಂದ್ರ ಆಡಳಿತ ವೈದ್ಯಾಧಿಕಾರಿ ಡಾ॥ ವೀಣಾ ಕಾಳಾಪೂರ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕಾ ಮಟ್ಟದ ಅಧಿಕಾರಿಗಳು, ನಗರ ಆರೋಗ್ಯ ಕೇಂದ್ರ (ಐಸಿಡಿಎಸ್) ICDS ಕಲಬುರಗಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು, 14 ವರ್ಷದಿಂದ 15 ವರ್ಷದೊಳಗಿನ ಹೆಣ್ಣು ಮಕ್ಕಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಗಳ ಆಸ್ತಿ ಸಂರಕ್ಷಣೆಗೆ ಕ್ರಮವಹಿಸಿ: ಶಾಸಕ ಮಂಜು



**ಕೆ.ಆರ್.ಪೇಟೆ.ಮಾ.14:** ವಿದ್ಯಾರ್ಥಿಗಳ ಕೊರತೆಯಿಂದ ತಾಲೂಕಿನ ಕೆಲವು ಕಡೆ ಸರ್ಕಾರಿ ಶಾಲೆಗಳು ಮುಚ್ಚಿವೆ. ಮುಚ್ಚಿಹೋದ ಸರ್ಕಾರಿ ಶಾಲೆಗಳ ಕಟ್ಟಡ, ಆಟದ ಮೈದಾನ ಸೇರಿದಂತೆ ಶಾಲೆಗಳ ಆಸ್ತಿಯನ್ನು ಸಂರಕ್ಷಣೆ ಮಾಡಲು ಶಾಲಾ ಆಸ್ತಿಯನ್ನು ಇ-ಸ್ವತ್ತು ಮಾಡಿಸಿಕೊಡುವಂತೆ ಕ್ಷೇತ್ರ ಶಿಕ್ಷಣಾಧಿಕಾರಿ ವೈ.ಕೆ.ತಿಮ್ಮೇಗೌಡ ಮನವಿ ಮಾಡಿದರು.

ಪಟ್ಟಣದ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಶಾಸಕ ಎಚ್.ಟಿ.ಮಂಜು ಅಧ್ಯಕ್ಷತೆಯಲ್ಲಿ ನಡೆದ ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳಾಗಿ ನಿಯೋಜನೆಗೊಂಡಿರುವ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ವೈ.ಕೆ.ತಿಮ್ಮೇಗೌಡ ಸರ್ಕಾರಿ ಶಾಲೆಗಳ ಆಸ್ತಿ ಸಂರಕ್ಷಣೆಗೆ ಕ್ರಮ ವಹಿಸುವಂತೆ ಕೋರಿದರು.

ಸರ್ಕಾರಿ ಶಾಲಾ ಆಸ್ತಿಯನ್ನು ಉಳಿಸಲು ಪಿ.ಡಿ.ಓ ಗಳು ಸಹಕರಿಸಬೇಕು. ಅನಗತ್ಯ ಕಾರಣಗಳನ್ನು ಹೇಳದೆ ಶಾಲಾ ಆಸ್ತಿಯನ್ನು ಇ-ಸ್ವತ್ತು ಮಾಡಿಕೊಡುವಂತೆ ಮನವಿ ಮಾಡಿದ ತಿಮ್ಮೇಗೌಡ ಗ್ರಾಮೀಣ ಪ್ರದೇಶದ ಬಹುತೇಕ ಸರ್ಕಾರಿ ಶಾಲೆಗಳಿಗೆ ಅಲ್ಲಿನ ಹಿರಿಯರು ಈ ಹಿಂದೆ ಜಾಗವನ್ನು ದಾನವಾಗಿ ನೀಡಿದ್ದಾರೆ. ಆದರೆ ಸರ್ಕಾರಿ ಆಸ್ತಿಯನ್ನು ನಿಖರವಾಗಿ ಅಳೆದು ಬೌಂಡರಿ ನಿರ್ಧರಿಸಲ್ಲ. ಈ ಕಾರಣದಿಂದ ದಾನಿಗಳ ಕುಟುಂಬಸ್ಥರು ಕೆಲವು ಕಡೆ ತಕರಾರು ತರುತ್ತಿದ್ದಾರೆ.

ದಾನಿಗಳು ನೀಡಿದ ಜಾಗವನ್ನು ಅಳತೆ ಮಾಡಿಸಿ ಶಾಲಾ ಸ್ವಾದೀನಕ್ಕೆ ನೀಡಿದರೆ ಅವುಗಳ ಇ-ಸ್ವತ್ತು ಪ್ರಕ್ರಿಯೆಗೆ ದಾರಿ ಸುಗಮವಾಗುತ್ತದೆ. ಶಾಲೆಗೆ ಅಗತ್ಯವಾದ ಶೇ.75 ರಷ್ಟು ಭೂಮಿಯನ್ನು ದಾನವಾಗಿ ನೀಡಿದ ದಾನಿಗಳ ಹೆಸರನ್ನು ಆಯಾ ಶಾಲೆಗಳಿಗೆ ಇಡಲು ಅವಕಾಶವಿದೆ. ದಾನಿಗಳ ಹೆಸರಿಡುವ ಬಗ್ಗೆ ದಾನಿಗಳ ಕುಟುಂಬಸ್ಥರು ನೀಡಿದ ಮನವಿಯನ್ನು ಪಿಡಿಓ ಗಳು ಪರಿಶೀಲಿಸಿ ವರದಿ ನೀಡಿದರೆ ಶಿಕ್ಷಣ ಇಲಾಖೆಯ ವತಿಯಿಂದ ಅಗತ್ಯ ಸಹಕಾರ ನೀಡಲಾಗುವುದೆಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಅಹವಾಲು ಆಲಿಸಿ ಮಾತನಾಡಿದ ಶಾಸಕ ಎಚ್.ಟಿ.ಮಂಜು ಸರ್ಕಾರಿ ಆಸ್ತಿ ಸಂರಕ್ಷಣೆ ಅಧಿಕಾರಿಗಳ ಜವಾಬ್ದಾರಿ. ಸರ್ಕಾರಿ ಶಾಲೆಗಳ ಆಸ್ತಿ ಸಂರಕ್ಷಣೆಗೆ ಪಿಡಿಓಗಳು ಅಗತ್ಯ ಸಹಕಾರ ನೀಡಬೇಕು. ತಾಲೂಕಿನ ಅಕ್ಕಿಹೆಬ್ಬಾಳು ಗ್ರಾಮದಲ್ಲಿ ಸರ್ಕಾರಿ ಶಾಲಾ ಮೈದಾನದಲ್ಲಿಯೇ ವ್ಯಕ್ತಿಯೊಬ್ಬರು ಕಟ್ಟಡ ನಿರ್ಮಿಸುತ್ತಿದ್ದಾರೆ. ಇದನ್ನು ನೋಡಿಯೂ ಅಲ್ಲಿನ ಪಿಡಿಓ ಕಣ್ಣು ಮುಚ್ಚಿ ಕುಳಿತಿದ್ದಾರೆ. ಕೆಲವು ಕಡೆ ಪಿಡಿಓ ಗಳು ತಮ್ಮ ಅಧಿಕಾರ ದುರುಪಯೋಗ ಮಾಡಿಕೊಂಡು ಸರ್ಕಾರಿ ಅಸ್ತಿಯನ್ನೂ ಖಾಸಗಿಯವರಿಗೆ ಇ-ಸ್ವತ್ತು ಮಾಡಿ ಗೊಂದಲ ಸೃಷ್ಟಿಸಿದ್ದಾರೆ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಡೆಯುವ ಪ್ರತಿಯೊಂದು ಕಾಮಗಾರಿಗಳ ಅರಿವು ಪಿಡಿಓಗಳಿಗಿರಬೇಕು.

ಗ್ರಾ.ಪಂ ಅನುಮತಿಯಿಲ್ಲದೆ ರಸ್ತೆ ಅಗೆಯುವುದು ಸೇರಿದಂತೆ ಯಾವುದೇ ಅಕ್ರಮ ಕಾಮಗಾರಿ ನಡೆದರೂ ಅದನ್ನು ನಿಯಂತ್ರಿಬೇಕಾದ ಜವಾಬ್ದಾರಿ ಪಿಡಿಓ ಗಳಿಗೆ ಸೇರಿದೆ. ಪಿಡಿಓಗಳು ತಮ್ಮ ಅಧಿಕಾರ ಬಳಕೆ ಮಾಡಬೇಕು. ಸರ್ಕಾರಿ ಶಾಲೆಗಳ ಅಸ್ತಿಯುನ್ನು ಇ-ಸ್ವತ್ತು ಮಾಡಿ ಅವುಗಳನ್ನು ಸಂರಕ್ಷಣೆ ಮಾಡುವಂತೆ ತಾಕೀತು ಮಾಡಿದರು.

ತಾ.ಪಂ ಕಾರ್ಯನಿರ್ವಹಣಾಧಿಕಾರಿ ಕೆ.ಸುಷ್ಮಾ, ತಾಲ್ಲೂಕು ಯೋಜನಾಧಿಕಾರಿ ಶ್ರೀನಿವಾಸ್, ಗ್ರೇಡ್-2 ತಹಸೀಲ್ದಾರ್ ಲೋಕೇಶ್, ಸೇರಿದಂತೆ ವಿವಿಧ ಗ್ರಾಮ ಪಂಚಾಯತಿಗಳ ಆಡಳಿತಾಧಿಕಾರಿ ಅಧಿಕಾರಿಗಳು ಮತ್ತು ಪಿಡಿಓ ಗಳು ಸಭೆಯಲ್ಲಿದ್ದರು.

# ಮಹಿಳೆಯರೊಂದಿಗೆ ಪೊಲೀಸರು ಠಾಣೆಯಲ್ಲಿ ಗೌರವಯುತವಾಗಿ ವರ್ತಿಸಿ: ನಾಗಲಕ್ಷ್ಮಿ ಚೌದರಿ



**ಮೈಸೂರು: ಮಾ.14:-** ಪೊಲೀಸ್ ಠಾಣೆಯಲ್ಲಿ ಮಹಿಳೆಯರು ದೂರು ದಾಖಲಿಸಲು ಅಥವಾ ಯಾವುದೇ ರೀತಿಯ ಮಾಹಿತಿ ಪಡೆಯಲು ಬಂದಾಗ ಅವರೊಂದಿಗೆ ಗೌರವಯುತವಾಗಿ ವರ್ತಿಸಿ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ತಿಳಿಸಿದರು.ಪ್ರಾದೇಶಿಕ ಆಯುಕ್ತರ ಚಾಮುಂಡೇಶ್ವರಿ ಸಭಾಂಗಣದಲ್ಲಿ ಜನ ಸುನ್ವಾಯಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು. ಮಹಿಳೆಯರು ಯಾವುದೇ ರೀತಿಯ ತೊಂದರೆ ಉಂಟಾದರು ನಿರ್ಭಯವಾಗಿ ಪೊಲೀಸ್ ಠಾಣೆಗೆ ಆಗಮಿಸಿ ದೂರು ಸಲ್ಲಿಸುವಂತಾಗಬೇಕು. ಕಟ್ಟಕಡೆಯ ಮಹಿಳೆಗೂ ನ್ಯಾಯ ಒದಗಿಸುವುದು ಆಯೋಗದ ಉದ್ದೇಶವಾಗಿದೆ. ಪೊಲೀಸ್ ಇಲಾಖೆ ಜನಸ್ನೇಹಿಯಾಗಿ ಕೆಲಸ ನಿರ್ವಹಿಸುತ್ತಿದ್ದು, ಇಲಾಖೆ ವತಿಯಿಂದ ನಡೆಸಲಾಗುವ ಕಾರ್ಯಕ್ರಮದ ಬಗ್ಗೆ ಹೆಚ್ಚಿನ ಪ್ರಚಾರ ನೀಡಿ ಇದರಿಂದ ಜನರಿಗೆ ಅನುಕೂಲವಾಗಲಿದೆ ಎಂದರು.

ಮಹಿಳೆಯರು ಪೊಲೀಸ್ ಠಾಣೆಗೆ ಭೇಟಿ ನೀಡಿದಾಗ ಸೌಜನ್ಯದಿಂದ ವರ್ತಿಸಿ, ಅವರಲ್ಲಿ ಆತ್ಮವಿಶ್ವಾಸ ತುಂಬಿ. ಮಹಿಳೆಯರು ಪೊಲೀಸ್ ಠಾಣೆಗೆ ಭೇಟಿ ನೀಡಿದಾಗ ಅನುಚಿತ ವರ್ತನೆ ಕಂಡುಬಂದಲ್ಲಿ ಹಿರಿಯ ಅಧಿಕಾರಿಗಳನ್ನು ಭೇಟಿ ಮಾಡಿ ತಪ್ಪದೇ ದೂರು ಸಲ್ಲಿಸಿ ಎಂದರು.

ಸರ್ಕಾರಿ ಸೇರಿ ಖಾಸಗಿ ಸಂಸ್ಥೆಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟಲು ಪಾಷ್ ಸಮಿತಿ ಇದೆ. ಸಮಿತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಬೇಕು.ಇದರ ಅನುಷ್ಠಾನ ಕುರಿತು ಪರಿಶೀಲನೆ ನಡೆಸುವಂತೆ ತಿಳಿಸಿದರು.

ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಮಾತನಾಡಿ ಪೊಲೀಸ್ ಇಲಾಖೆಯಿಂದ ಹಲವಾರು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಹೆಣ್ಣು ಮಕ್ಕಳು ಯಾವುದಾದರೂ ಶೋಷಣೆಗೆ ಒಳಗಾದರೆ ತಕ್ಷಣ ಹತ್ತಿರದ ಪೊಲೀಸ್ ಠಾಣೆಯನ್ನು ಸಂಪರ್ಕಿಸಿ ಎಂದರು.ಹೆಣ್ಣು ಮಕ್ಕಳ ರಕ್ಷಣೆಗಾಗಿ ಅಕ್ಕ ಪಡೆ ಎಂಬ ಪೊಲೀಸ್ ಇಲಾಖೆ ವಾಹನವು ಮುಖ್ಯವಾಗಿ ಕಾಲೇಜು, ತೊಂದರೆ ಇರುವ ಸ್ಥಳಗಳಲ್ಲಿ ಹೆಚ್ಚು ಗಸ್ತು ಮಾಡಲಾಗುತ್ತದೆ. ಮೈಸೂರು ನಗರದಲ್ಲಿಮಾದಕ ವಸ್ತುಗಳ ಸೇವನೆ ಹಾಗೂ ಸಾಗಣಿಕೆಯನ್ನು ತಡೆಗಟ್ಟಲು ವಿಮುಕ್ತಿ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದರು.

2023 ನೇ ಸಾಲಿನಿಂದ ಗಮನಿಸಿದರೆ ಮೈಸೂರು ನಗರ ವ್ಯಾಪ್ತಿಯಲ್ಲಿ ಅಪರಾಧಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿರುತ್ತದೆ. ಅಪರಾಧ ಕೃತ್ಯಗಳನ್ನು ತಡೆಗಟ್ಟಲು ಸಾರ್ವಜನಿಕರು ಸಹ ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಸಭೆಗೆ ಬಹಳಷ್ಟು ಮಹಿಳೆಯರು ನಿವೇಶನ, ಮೂಲಭೂತ ಸೌಕರ್ಯಗಳ ಬಗ್ಗೆ ಮನವಿ ಸಲ್ಲಿಸಿದವರಿಗೆ ಸಂಬಂಧಿಸಿದ ಅಧಿಕಾರಿಗಳನ್ನು ಸಂಪರ್ಕಿಸುವಂತೆ ಮಾಹಿತಿ ನೀಡಿದರು.

ಸಭೆಯಲ್ಲಿ ಮಹಿಳೆಯೊಬ್ಬರು ತಮಗೆ ಖಾಸಗಿ ಸಂಸ್ಥೆಯಿಂದ ಇರಲು ಮನೆ ಸೇರಿ ಮೂಲಸೌಲಭ್ಯಗಳ ತೊಂದರೆಯಾಗುತ್ತಿರುವ ಬಗ್ಗೆ ತಿಳಿಸಿದಾಗ ಅಪರ ಜಿಲ್ಲಾಧಿಕಾರಿ ಸ್ಪಂದಿಸಿ ಪೂರ್ಣ ಮಾಹಿತಿಯೊಂದಿಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಭೇಟಿ ನೀಡುವಂತೆ ತಿಳಿಸಿದರು.ಎ.ಸಿ.ಪಿ ಗಂಗಾಧರ್ ಸ್ವಾಮಿ ಮಾತನಾಡಿ ಪ್ರತಿ ಮಾಹೆ ಜನಸಂಪರ್ಕ ಸಭೆ, ಪ್ರತಿ ಮಾಹೆಯ ಕೊನೆಯ ಭಾನುವಾರ ಶೋಷಣೆಗೆ ಒಳಗಾದವರ ದಿನ, ಮನೆ ಮನೆ ಪೊಲೀಸ್ ಸೇರಿ ಪೊಲೀಸ್ ಇಲಾಖೆಯ ವಿವಿಧ ಕಾರ್ಯಕ್ರಮಗಳ ಬಗ್ಗೆ ವಿವರಿಸಿದರು.

ಸಭೆಯಲ್ಲಿ ಎ.ಎಸ್.ಪಿ ನಾಗೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಬಸವರಾಜು ಸೇರಿ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಿಲಿಂಡರ್ ಅಭಾವ: ಬೀದಿಯಲ್ಲೇ ಸೌದೆ ಒಲೆ ಹಚ್ಚಿದ ವಾಟಾಳ್

**ಮೈಸೂರು: ಮಾ.14:-** ಯುದ್ಧದ ಹಿನ್ನೆಲೆಯಲ್ಲಿ ದೇಶಾದ್ಯಂತ ಸಿಲಿಂಡರ್ ಅಭಾವದ ಹಿನ್ನೆಲೆಯಲ್ಲಿ ಯುದ್ಧನಿಲ್ಲಿಸುವಂತೆ ಹಾಗೂ ಸಮರ್ಪಕ ಅನಿಲ ಪೂರೈಕೆಗೆ ಒತ್ತಾಯಿಸಿ ನಗರದ ರಸ್ತೆಯಲ್ಲೇ ಸೌದೆ ಒಲೆ ಹಚ್ಚಿ ವಾಟಾಳ್ ನಾಗರಾಜ್ ಪ್ರತಿಭಟಿಸಿದ ಘಟನೆ ನಡೆಯಿತು.



ನಗರದ ಜಯಚಾಮರಾಜೇಂದ್ರ ವೃತ್ತದಲ್ಲಿ ಕನ್ನಡ ಚಳವಳಿ ಸಮಿತಿ ನೇತೃತ್ವದಲ್ಲಿ ಪ್ರತಿಭಟಿಸಿದ ಅವರು, ಎಲ್‌ಪಿಜಿ ಸಿಲಿಂಡರ್ ಕೊರತೆ ವಿರುದ್ಧ ಸೌದೆ ಒಲೆಯಲ್ಲಿ ನೀರು ಕಾಯಿಸುವ ಮೂಲಕ ಪ್ರತಿಭಟನೆ ನಡೆಸಿದರು. ಬಳಿಕ ಮಾತನಾಡಿ, ಸದ್ಯ ಬಹಳ ಗಂಭೀರವಾದ ಪರಿಸ್ಥಿತಿಯಲ್ಲಿ ಯುದ್ಧ ಬೇಕಾಗಿಲ್ಲ. ಅಮೇರಿಕಾದವರಿಗೆ ಜೀವನಪರ್ಯಂತ ಯುದ್ಧ ಬೇಕು. ಇಸ್ರೇಲ್ ಯಹೂದಿ ಗಳಿಗೆ ಯುದ್ಧ ಬೇಕು. ಪ್ರಪಂಚದ ಸಾಮಾನ್ಯ ಜನರ ಮೇಲೆ ಇದರ ಪರಿಣಾಮ ಬೀರಿದೆ. ಪೆಟ್ರೋಲ್ , ಗ್ಯಾಸ್ , ಔಷಧೀಯ ಕೊರತೆಯಿಂದ ಪ್ರಪಂಚದ ಕಣ್ಣೀರು ಇಡುತ್ತಿದೆ. ಟ್ರಂಪ್ ಗೆ ಇದು ಆಟವಾಗಿದೆ. ಇರಾನ್ ಮುಖ್ಯಸ್ಥರನ್ನು ಕೊಂದಿದ್ದೀರಿ. ಅಮೇರಿಕಾ ಮೊದಲಿಂದಲೂ ಸಾಮ್ರಾಜ್ಯಶಾಹಿ.ನಮ್ಮನ್ನು ಬಿಟ್ಟರೆ ಯಾರೂ ಇಲ್ಲ ಎನ್ನುತ್ತಾರೆ. ಮಹಾತ್ಮ ಗಾಂಧಿ ಯವರ ತತ್ವ ಸಿದ್ಧಾಂತಕ್ಕೆ ಬದ್ಧರಾಗಬೇಕು. ಪ್ರಪಂಚದ ಮಾತನ್ನು ಅಮೇರಿಕಾ ಕೇಳಬೇಕು. ಕೇಳದಿದ್ದರೆ ಅಮೇರಿಕಾ ವಿರುದ್ಧ ಯುದ್ಧಕ್ಕೆ ಪ್ರಪಂಚ ಇಳಿಯಬೇಕಾಗುತ್ತದೆ ಎಂದರು.

ಟ್ರಂಪ್ ಸರಿ ಇಲ್ಲ, ಅಧ್ಯಕ್ಷರಾಗಿ ಈ ಮಟ್ಟಕ್ಕೆ ಇಳಿಯಬಾರದು. ಟ್ರಂಪ್ ಗೆ ಕಳಕಳಿಯ ಮನವಿಯನ್ನು ಮಾಡುತ್ತೇನೆ. ಯುದ್ಧ ನಿಲ್ಲಿಸಿ. ಅಮೇರಿಕಾ ಬಹಿರಂಗ ಕ್ಷಮೆ ಕೇಳಬೇಕು. ಪ್ರಧಾನ ಮಂತ್ರಿ ಮೋದಿ ಬೇರೆ ದೇಶದಲ್ಲಿ ಒಳ್ಳೆಯ ಹೆಸರನ್ನು ತೆಗೆದುಕೊಂಡಿದ್ದಾರೆ. ಪ್ರಧಾನಿ ಹಾಗೂ ವಿರೋಧ ಪಕ್ಷದ ನಾಯಕರು ಯುದ್ಧ ನಿಲ್ಲಲಿ ಎಂದು ಟ್ರಂಪ್ ಬೇಟಿ ಮಾಡಿದರೆ ಒಳ್ಳೆಯುದು. ನರೇಂದ್ರ ಮೋದಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಎಲ್ಲರೂ ಯುದ್ಧ ನಿಲ್ಲಿಸಬೇಕು ಅಂತ ಟ್ರಂಪ್ ಗೆ ಹೇಳಲಿ. ಅನಿವಾರ್ಯ ಬಿದ್ದರೆ ನಾವು ಕರ್ನಾಟಕ ಬಂದ್ ಗೆ ಕರೆ ಕೊಡುತ್ತೇವೆ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಕನ್ನಡ ಚಳವಳಿ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ, ಕರ್ನಾಟಕ ಸೇನಾಪಡೆ ಅಧ್ಯಕ್ಷ ತೇಜೇಸ್ ಲೋಕೇಶ್ ಗೌಡ ಇನ್ನಿತರರು ಉಪಸ್ಥಿತರಿದ್ದರು.

# ಕಾಳಸಂತೆಯಲ್ಲಿ ಸಿಲಿಂಡರ್ ಮಾರಿದರೆ ಕಠಿಣ ಕ್ರಮ



**ಧಾರವಾಡ, ಮಾ14:** ಗೃಹಬಳಕೆಯ ಗ್ರಾಹಕರಿಗೆ ಗೃಹಬಳಕೆಯ ಸಿಲಿಂಡರ್‌ಗಳನ್ನು ವಿತರಿಸಲಾಗುತ್ತಿದೆ. ಗೃಹಬಳಕೆ ಸಿಲೆಂಡರ್‌ಗಾಗಿ ಬುಕ್ ಮಾಡಲು ನಗರ ಪ್ರದೇಶದ ಗ್ರಾಹಕರಿಗೆ 25 ದಿನ ಮತ್ತು ಗ್ರಾಮೀಣ ಭಾಗದ ಗ್ರಾಹಕರಿಗೆ 45 ದಿನಗಳ ಅವಕಾಶವಿದೆ. ಯಾರು ಕೂಡಾ ವದಂತಿಗಳಿಗೆ ಒಳಗಾಗಿ ಅವಸರ ಪಡದೇ ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಎಲ್‌ಪಿಜಿ ವಿತರಕರ, ಹೋಟೆಲ್ ಮಾಲೀಕರ ಮತ್ತು ಸಿಲಿಂಡರ್ ಏಜೆನ್ಸಿಗಳ ಪ್ರತಿನಿಧಿಗಳ ಸಭೆ ಜರುಗಿಸಿ, ಮಾತನಾಡಿದರು.

ಕೇವಲ ಗೃಹಬಳಕೆಯ ಸಿಲೆಂಡರ್‌ಗಳನ್ನು ಮಾತ್ರ ನಿಯಮಾನುಸಾರ ವಿತರಿಸಲಾಗುತ್ತಿದೆ. ಮಾರುಕಟ್ಟೆಯಲ್ಲಿ ಗೃಹಬಳಕೆಯ ಸಿಲೆಂಡರ್‌ಗಳನ್ನು ಅಥವಾ ಸಣ್ಣ ಸಿಲೆಂಡರ್‌ಗಳನ್ನು ಹೆಚ್ಚಿನ ದರಕ್ಕೆ ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಕಾನೂನು ಕ್ರಮಕೈಗೊಳ್ಳಲಾಗುವುದು. ಈ ಕುರಿತು ಪರಿಶೀಲಿಸಿ ಕ್ರಮಕೈಗೊಳ್ಳಲು ತಂಡಗಳನ್ನು ರಚಿಸಲಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಿರ್ದೇಶನದ ಪ್ರಕಾರ ಗ್ರಾಹಕರಿಗೆ ಸಿಲೆಂಡರ್‌ಗಳನ್ನು ವಿತರಿಸಲಾಗುತ್ತಿದೆ ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿ ಐಓಸಿ 13, ಬಿಪಿಸಿ 18, ಎಲ್‌ಪಿಜಿ 22 ಒಟ್ಟು 55 ಗ್ಯಾಸ್ ಡೀಲರ್‌ಗಳು ಇದ್ದಾರೆ. ಮತ್ತು ಐಓಸಿ, ಬಿಪಿಸಿ, ಎಲ್‌ಪಿಜಿ ಕಂಪನಿಗಳು ಸೇರಿ ಸಿಂಗಲ್ ಗ್ಯಾಸ್ ಕನೆಕ್ಷನ್ 2,83,796 ಮತ್ತು ಡಬಲ್ ಗ್ಯಾಸ್ ಕನೆಕ್ಷನ್ 3,47,265 ಸೇರಿ ಒಟ್ಟು 6,31,061 ಗ್ಯಾಸ್ ಸಂಪರ್ಕಗಳಿವೆ. ಮತ್ತು ವಾಣಿಜ್ಯ ಬಳಕೆಗಾಗಿ 11,799 ವಾಣಿಜ್ಯ ಸಿಲಿಂಡರ್ ಸಂಪರ್ಕಗಳಿವೆ. ಒಟ್ಟಾರೆಯಾಗಿ ಗೃಹಬಳಕೆ ಮತ್ತು ವಾಣಿಜ್ಯ ಬಳಕೆ ಸೇರಿ 6,42,860 ಗ್ಯಾಸ್ ಸಂಪರ್ಕಗಳಿವೆ. ಕಳೆದ 60 ದಿನಗಳ ಸರಾಸರಿಯಂತೆ ಪ್ರತಿದಿನ ಜಿಲ್ಲೆಯಲ್ಲಿ 10,987 ಸಿಲೆಂಡರ್‌ಗಳನ್ನು ವಿತರಿಸಲಾಗುತ್ತಿದೆ ಎಂದು ಅವರು ಹೇಳಿದರು.

ಸಿಲೆಂಡರ್‌ಗಳ ವಿತರಣೆಯಲ್ಲಿ ವೈದ್ಯಕೀಯ, ಶಾಲಾ ಕಾಲೇಜು, ಅಂಗನವಾಡಿ, ಹಾಸ್ಟೇಲ್, ಇಂದಿರಾ ಕ್ಯಾಂಟಿನ್‌ಗಳಿಗೆ ಆಧ್ಯತೆ ನೀಡಬೇಕು. ಸಿಲೆಂಡರ್‌ಗಳ ರೀಫಿಲಿಂಗ್ ಬುಕ್ಕಿಂಗ್ ಮಾಡಿದ ಕನಿಷ್ಠ 25 ದಿನಗಳ ನಂತರ ನಗರಗಳಲ್ಲಿ ಹಾಗೂ 45 ದಿನಗಳ ನಂತರ ಗ್ರಾಮೀಣ ಭಾಗದಲ್ಲಿ ಸಿಲೆಂಡರ್‌ಗಳು ದೊರೆಯುತ್ತವೆ. ಗೃಹಬಳಕೆಯ ಸಿಲೆಂಡರ್‌ಗಳನ್ನು ಅಕ್ರಮವಾಗಿ ವಾಣಿಜ್ಯ ಬಳಕೆಗೆ ಬಳಸಿಕೊಳ್ಳುವುದನ್ನು ನಿರ್ಭಂಧಿಸಲಾಗಿದೆ. ಮತ್ತು ಅಕ್ರಮ ಅನೀಲ ಸಿಲೆಂಡರ್‌ಗಳ ವಿತರಣೆ ಕಂಡುಬಂದಲ್ಲಿ ಅಗತ್ಯ ವಸ್ತುಗಳ ಕಾಂಯ್ದೆಯಡಿ ಪ್ರಕರಣ ದಾಖಲಿಸಿ, ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

ಜಿಲ್ಲೆಯಲ್ಲಿ ಎಲ್‌ಪಿಜಿಸಿಲೆಂಡರ್‌ಗಳ ಕೊರತೆ ಇರುವುದಿಲ್ಲ. ಆದ್ದರಿಂದ ಸಾರ್ವಜನಿಕರು, ಜಿಲ್ಲೆಯ ಎಲ್ಲಾ ಎಲ್‌ಪಿಜಿ ಗ್ರಾಹಕರು ಭಯಪಡುವ ಅಗತ್ಯವಿಲ್ಲ ಮತ್ತು ಸಾಮಾಜಿಕ ಜಾಲ ತಾಣಗಳಲ್ಲಿ ಹರಿದಾಡುತ್ತಿರುವ ಸುಳ್ಳು ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು. ಗ್ರಾಹಕರು ಸಿಲಿಂಡರ್‌ಗಳ ರೀಫಿಲಿಂಗ್ ಬುಕ್ಕಿಂಗ್ ಮಾಡಿದ ನಂತರ ಕನಿಷ್ಠ ಅವಧಿಗೆ ಕಾಯಬೇಕು. ಅನಗತ್ಯವಾಗಿ ಗ್ಯಾಸ್ ವಿತರಕರ ಹಾಗೂ ಗ್ಯಾಸ್ ಡಿಲರ್‌ಗಳ ಕಚೇರಿ ಅಥವಾ ಉಗ್ರಾಣಗಳಿಗೆ ತೆರಳಿ ಒತ್ತಡ ಹಾಕಬಾರದು ಅವರು ಸಹ ಸರ್ಕಾರದ ಸೂಚನೆಗಳ ಪ್ರಕಾರ ಕಾರ್ಯನಿರ್ವಹಿಸಬೇಕು. ಆದ್ದರಿಂದ ಸಾರ್ವಜನಿಕರು ಸಹಕಾರ ನೀಡಬೇಕೆಂದು ಅವರು ಹೇಳಿದರು.

ಗೃಹಬಳಕೆ ಸಿಲೆಂಡರ್‌ಗಳನ್ನು ವಾಣಿಜ್ಯ ಬಳಕೆಗೆ ಉಪಯೋಗಿಸಬಾರದು. ಅಲ್ಲದೇ ಸಿಲೆಂಡರ್‌ಗಳನ್ನು ಅನಧಿಕೃತವಾಗಿ ಸಂಗ್ರಹಿಸಿ ಒಂದು ಸಿಲೆಂಡರ್‌ನಿಂದ ಮತ್ತೊಂದು ಸಿಲೆಂಡರ್‌ಗೆ ವರ್ಗಾಯಿಸುವದು (Liquefied Petroleum Gas (REGULATION OF SUPPLY AND DISTRUBUTION) Order 2000 ರನ್ವಯ) ಅಪರಾಧವಾಗಿರುತ್ತದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದರು.

ಸಭೆಯಲ್ಲಿ ಧಾರವಾಡ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಮಹೇಶ ಶೆಟ್ಟಿ ಹಾಗೂ ಗ್ಯಾಸ್ ಡಿಲರ್ಸ್ ಮಾಲೀಕರು ಮಾತನಾಡಿದರು.

ಸಭೆಯಲ್ಲಿ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಐಓಸಿ, ಬಿಪಿಸಿ, ಎಲ್‌ಪಿಜಿ ಕಂಪನಿಗಳ ಪ್ರತಿನಿಧಿಗಳು, ಹೋಟೆಲ್ ಮಾಲೀಕರ ಸಂಘದ ಪದಾಧಿಕಾರಿಗಳು, ಹೋಟೆಲ್ ಮಾಲೀಕರು, ಗ್ಯಾಸ್ ವಿತರಕರು ಹಾಗೂ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಆಹಾರ ನಿರೀಕ್ಷಕರು ಭಾಗವಹಿಸಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ
6360866626

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE